# ವಿಜಯ ಕಾಲ

ಪ್ರಧಾನ ಸಂಪಾದಕ: ಕೆ. ದೀಪಕ್

ಓದುಗರ ಒಡಲಾಳ

ಬೆಳಗಿನ ಕನ್ನಡ ದಿನಪತ್ರಿಕೆ

ಮೈಸೂರು | ಚಾಮರಾಜನಗರ | ಮಂಡ್ಯ | ಬೆಂಗಳೂರು

RNI:KARKAN/2017/74098 | ಸಂಪುಟ: 08 | ಸಂಚಿಕೆ: 33 | ಮಂಗಳವಾರ 09 ಡಿಸೆಂಬರ್ 2025 | ದೂರವಾಣಿ – 9741511340 – 8123436767 | vijayakaalamysuru@gmail.com | ಪುಟ–4 | ರೂ. 2



Bhavishya Academy


# ಒಳಗೆ ಸಂತಾಪ, ಹೊರಗೆ ತಾಪ

## ಅಧಿವೇಶನದಲ್ಲಿ ಅಗಲಿದ ಗಣ್ಯರಿಗೆ ನುಡಿನಮನ

## ತಿಮ್ಮಕ್ಕ ಹೆಸರಿನಲ್ಲಿ ಪರಿಸರ ಪ್ರಶಸ್ತಿ: ಸಿಎಂ



ಬೆಳಗಾವಿ: ಇಂದಿನಿಂದ ಆರಂಭಗೊಂಡಿರುವ ಬೆಳಗಾವಿ ಚಳಗಾಲ ಅಧಿವೇಶನದಲ್ಲಿ ಹಿರಿಯ ರಾಜಕಾರಣಿಗಳಾದ ಎಂ.ವೈ. ಮೇಟಿ, ಆರ್.ವಿ. ದೇವರಾಜ್, ಶಿವಪ್ಪ ಶರಣಪ್ಪಗೌಡ ಪಾಟೀಲ್, ಖ್ಯಾತ ಕಾದಂಬರಿಗಾರ ಎಸ್.ಎಲ್.ಭೈರಪ್ಪ, ಸಾಲುಮರದ ತಿಮ್ಮಕ್ಕ ಮತ್ತು ಖ್ಯಾತ ಹಾಸ್ಯ ನಟ ಉಮೇಶ್ ಅವರಿಗೆ ಸ್ಪೀಕರ್ ಯು.ಟಿ. ಖಾದರ್, ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದರು.

ಅಧಿವೇಶನದ ಆರಂಭದಲ್ಲಿ ರಾಷ್ಟ್ರಭಕ್ತಿ ಗೀತೆ ಮತ್ತು ಸಂವಿಧಾನ ಪೀಠಿಕೆ ಬೋಧಿಸುವ ಮೂಲಕ ಸಭಾಪತಿ ಯು.ಟಿ. ಖಾದರ್ ಅವರು ಇತ್ತೀಚೆಗೆ ನಿಧನರಾದ ಗಣ್ಯರ ಹೆಸರುಗಳನ್ನು ಪ್ರಕಟಿಸಿ ಸಂತಾಪ ಸೂಚನೆ ನಿರ್ಣಯವನ್ನು ಸಭೆಯಲ್ಲಿ ಸಂಡಿಸಿದರು.

ಸಂತಾಪ ಸೂಚನೆ ನಿರ್ಣಯದ ಮೇಲೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಂ.ವೈ. ಮೇಟಿ ಅವರು ಓರ್ವ ಸಜ್ಜನ ಮತ್ತು ಪ್ರಾಮಾಣಿಕ ರಾಜಕಾರಣಿ. 1983ರಿಂದ ಅವರೊಂದಿಗೆ ಒಡನಾಟ ಇಟ್ಟುಕೊಂಡಿದ್ದೆ. ಅಂದಿನಿಂದ ಇಂದಿನವರೆಗೂ ಬಹಳ ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರಾಗಿ ಉಳಿದುಕೊಂಡಿದ್ದರು, ಅತ್ಯಂತ ಸ್ಥಳೀಯ ಸಂಸ್ಥೆಗಳನ್ನು ಪ್ರತಿನಿಧಿಸುವ ಮೂಲಕ ಸಚಿವ ಸ್ಥಾನದವರೆಗೂ ಬೆಳೆದು ನಿಂತಿದ್ದರು. ನನ್ನ ದೊಡ್ಡ ಅಭಿಮಾನಿಯಾಗಿದ್ದರು. ನಾನು ಏನೇ ಹೇಳಿದ್ರೂ ಅದರ ವಿರುದ್ಧ ನಿಲ್ಲುತ್ತಿರಲಿಲ್ಲ. ಅಷ್ಟರ ಮಟ್ಟಿಗೆ ನನ್ನ ಬಗ್ಗೆ ಅಭಿಮಾನ ಇಟ್ಟಿದ್ದರು ಎಂದರು.

ಬಾಲಗೋಟೆಯಲ್ಲಿ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗುವುದು ಸುಲಭದ ಮಾತಲ್ಲ. ಅವರೊಬ್ಬ ಜಾತ್ಯಾತೀತ ರಾಜಕಾರಣಿಯಾಗಿ ಎಲ್ಲರ ಮನ ಗೆದ್ದಿದ್ದರು.

ಹಾಗೇ ಇತ್ತೀಚೆಗೆ ನಿಧನರಾದ ಕಾಂಗ್ರೆಸ್‌ನ ಮತ್ತೋರ್ವ ಪುಟ 02

## ಮೊಗಸಾಲೆಯಲ್ಲಿ ರಾಜಕೀಯ ತಾಪಮಾನ

## ಮುಖ್ಯಮಂತ್ರಿ ಬದಲಾವಣೆ ಸದ್ಯಕ್ಕಿಲ್ಲ

### ಹೈಕಮಾಂಡ್ ಸಂದೇಶದ ಸುಳಿವು ನೀಡಿದ ಡಾ.ಯತೀಂದ್ರ ಸಿದ್ದರಾಮಯ್ಯ

ಬೆಳಗಾವಿ: ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ನಾಯಕತ್ವ ಬದಲಾವಣೆ ವಿಚಾರವಾಗಿಯೆ ಬಿಸಿಬಿಸಿ ಚರ್ಚೆಗಳು ಆರಂಭಗೊಂಡಿದೆ. ಅಧಿವೇಶನದ ಮೊದಲ ದಿನವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ, ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಮತ್ತೊಮ್ಮೆ ಪೂರ್ಣಾವಧಿ ಮುಖ್ಯಮಂತ್ರಿ ಬಾಂಬ್ ಸಿಡಿಸಿದ್ದಾರೆ.

ನಾಯಕತ್ವ ಅಥವಾ ಮುಖ್ಯಮಂತ್ರಿ ಬದಲಾವಣೆ ಸದ್ಯಕ್ಕೆ ಇಲ್ಲ ಎಂಬ ಸಂದೇಶವನ್ನು ಹೈಕಮಾಂಡ್ ರವಾನಿಸಿದೆ ಎಂಬ ಹೇಳಿಕೆ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಹೌದು ! ಕಾಂಗ್ರೆಸ್‌ನಲ್ಲಿ ಗೊಂದಲ ಇತ್ತು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಮಗೊಂದು ಅವಕಾಶ ಕೊಡಿ ಎಂದು ಕೇಳಿದ್ದರು. ಅದರೆ, ನಾಯಕತ್ವ ಬದಲಾವಣೆ ಸದ್ಯಕ್ಕೆ ಇಲ್ಲ ಎಂದು ಹೈಕಮಾಂಡ್ ತಿಳಿಸಿದೆ. ಅಂದ ಮೇಲೆ ಸಿದ್ದರಾಮಯ್ಯ ಅವರು ಐದು ವರ್ಷ ಪೂರ್ಣ ಸಿಎಂ ಆಗಿ ಇರುತ್ತಾರೆ ಎಂದರ್ಥವಲ್ಲವೇ? ಎಂದು ಮಾಧ್ಯಮದವರಿಗೆ ಡಾ. ಯತೀಂದ್ರ ಮರು ಪ್ರಶ್ನೆ ಹಾಕಿದ್ದಾರೆ.

ಕಾಂಗ್ರೆಸ್‌ನಲ್ಲಿ ಅಧಿಕಾರಕ್ಕಾಗಿ ಯಾವುದೇ ಕಿತ್ತಾಟ ನಡೆದಿಲ್ಲ. ಇದೆಲ್ಲ ಪ್ರತಿಪಕ್ಷದವರ ಸೃಷ್ಟಿ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಸಿಎಂ ಬದಲಾಗುತ್ತಾರೆಂದು ಹೇಳುತ್ತಿದ್ದಾರೆ. ಆದರೆ ಸಿಎಂ ಬದಲಾಗುತ್ತಾರೆ ಎಂಬ ಕನಸು ಕಾಣಬೇಕಷ್ಟೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ 5 ವರ್ಷ ಪೂರೈಸುತ್ತಾರೆ ಎಂಬ ನಂಬಿಕೆ ವೈಯುಕ್ತಿಕವಾಗಿ ನನಗಿದೆ ಎಂದಿದ್ದಾರೆ. ಪುಟ 02



> ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಗೆ ಚುಟುಕಾಗಿ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲ ಹೈಕಮಾಂಡ್ ತೀರ್ಮಾನ ಮಾಡುತ್ತೆ. ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಹೇಳಿಕೆ ನೀಡಿದ್ದಾರೆ.

## ಸಾಲು ಸುದ್ದಿ

### ಆನ್‌ಲೈನ್‌ನಲ್ಲಿ 82 ಲಕ್ಷ ರೂ. ವಂಚನೆ

ಮೈಸೂರು : ಭಾರತೀಯ ದೂರ ಸಂಪರ್ಕ ನಿಯಂತ್ರಣ ಪ್ರಾಧಿಕಾರ(ಟ್ರಾಯ್) ಹಾಗೂ ಮುಂಬೈನ ಬಾಂದ್ರಾ ಪೊಲೀಸ್ ಅಧಿಕಾರಿ ಸೋಗಿನಲ್ಲಿ ನಗರದ ವೃದ್ಧರೊಬ್ಬರಿಗೆ 82 ಲಕ್ಷ ರೂ. ವಂಚಿಸಿರುವ ಘಟನೆ ನಡೆದಿದೆ.

ವಿಜಯನಗರ 4ನೇ ಹಂತದಲ್ಲಿ ನೆಲೆಸಿರುವ 49 ವರ್ಷದ ವೃದ್ಧರೊಬ್ಬರಿಗೆ ಕರೆ ಮಾಡಿದ ವ್ಯಕ್ತಿಯೊಬ್ಬ, ತಾನು ಟ್ರಾಯ್ ನೋಟಿಫಿಕೇಷನ್ ವಿಭಾಗದ ಪಿಆರ್‌ಒ ಎಂ.ವಿ.ಅಮಿತ್ ಈ ಶ್ಯಾಂ ಎಂದು ಪರಿಚಯಿಸಿಕೊಂಡಿದ್ದಾನೆ. ನಿಮ್ಮ ಹೆಸರಿನಲ್ಲಿರುವ ಸಿಮ್ ಅಪರಾಧ ಕೃತ್ಯಗಳಲ್ಲಿ ಬಳಕೆಯಾಗಿದ್ದು, ಈ ಬಗ್ಗೆ ಮುಂಬೈನ ಬಾಂದ್ರಾ ಪೊಲೀಸ್ ಠಾಣೆಗೆ ಕರೆ ಮಾಡಿ, ಸ್ಪಷ್ಟನೆ ನೀಡುವಂತೆ ತಿಳಿಸಿದ್ದಾನೆ. ಬಳಿಕ ಆತ ನೀಡಿದ ನಂಬರ್‌ಗೆ ವೃದ್ಧ ವಿಡಿಯೋ ಕರೆ ಮಾಡಿದಾಗ ಕಚೇರಿಯಲ್ಲಿ ಕುಳಿತಿದ್ದ ಪೊಲೀಸ್ ಸಮವಸ್ತ್ರ ಧರಿಸಿದ್ದ ವ್ಯಕ್ತಿಯೊಬ್ಬ ಮಾತನಾಡಿದ್ದಾನೆ.

ನಿಮ್ಮ ಹೆಸರಿನಲ್ಲಿ ಅಶ್ಲೀಲ ವಿಡಿಯೋ ಹಾಗೂ ಕಾನೂನುಬಾಹಿರ ಜಾಹೀರಾತು ಕಳುಹಿಸಿ ಮುಂಬೈನ ಸಾರ್ವಜನಿಕರಿಗೆ ಬೆದರಿಕೆ ಕರೆ ಮಾಡುತ್ತಿರುವುದಾಗಿ ತಿಳಿಸಿ, ಬೆದರಿಸಿದ್ದಾನೆ. ಬಳಿಕ ನಿಮ್ಮ ಹೆಸರಿನಲ್ಲಿ ಬ್ಯಾಂಕ್ ಖಾತೆ ಇದ್ದು, ಅದರಲ್ಲಿ 2 ಕೋಟಿ ರೂ. ಚಲಾವಣೆ ಮಾಡಲಾಗಿದೆ. ನಿಮ್ಮ ಮೇಲ್ ಐಡಿಯನ್ನೂ ಬಳಸಲಾಗಿದೆ.

ಮನಿ ಲ್ಯಾಂಡ್ರಿಂಗ್ ಪ್ರಕರಣದಲ್ಲಿ ನಿಮಗೆ ಮತ್ತು ನಿಮ್ಮ ಪತ್ನಿಗೆ ಅರೆಸ್ಟ್ ವಾರೆಂಟ್ ಆಗಿದೆ ಎಂದು ಮತ್ತಷ್ಟು ಪುಟ 02


### ಬೆಂಗಳೂರಲ್ಲಿ ಚಳಿ ಹೆಚ್ಚಳ

ಬೆಂಗಳೂರು:– ಬೆಂಗಳೂರಿನಲ್ಲಿ ಕನಿಷ್ಠ 15 ಡಿಗ್ರಿ ಸೆಲ್ಸಿಯಸ್ ಮತ್ತು ಗರಿಷ್ಠ ತಾಪಮಾನ 26 ಡಿಗ್ರಿ ಸೆಲ್ಸಿಯಸ್ ವರೆಗೆ ಇರುತ್ತದೆ ಎಂದು ನಿರೀಕ್ಷಿಸಲಾಗಿದೆ. ಬೆಂಗಳೂರಿನಲ್ಲಿ ಸಂಜೆ 5.55 ಕ್ಕೆ ಸೂರ್ಯಾಸ್ತವಾಗುವ ನಿರೀಕ್ಷೆಯಿದೆ. ಆರ್ದ್ರತೆಯು ಸುಮಾರು 49 ಪ್ರತಿಶತದಷ್ಟು ಇರುತ್ತದೆ ಎಂದು ನಿರೀಕ್ಷಿಸಲಾಗಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ರಾಜ್ಯದೆ ಇತರೆಡೆ ಒಣಹವೆ: ಹವಾಮಾನ ಇಲಾಖೆ ಮೂಲವನ್ನು ಉಲ್ಲೇಖಿಸಿ, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ಎಕ್ಸ್‌ನಲ್ಲಿನ ಹವಾಮಾನ ವರದಿಯನ್ನು ಹಂಚಿಕೊಂಡಿದ್ದು, ರಾಜ್ಯಾದ್ಯಂತ ಒಣ ಹವಾಮಾನ ಮುಂದುವರಿಯುವ ಸಾಧ್ಯತೆಯಿದೆ, ಬೆಳಿಗ್ಗೆ ಮಂಜು ಕವಿದ ವಾತಾವರಣವಿರುತ್ತದೆ ಎಂದು ಹೇಳಿದೆ.

## ಮೈಸೂರು ಉದ್ಯಮಿ ಕಿಡ್ನಾಪ್: ನಾಲ್ವರ ಬಂಧನ

### ಕೆಲವೇ ಗಂಟೆಗಳಲ್ಲಿ ನಗರ ಪೊಲೀಸರ ಯಶಸ್ವಿ



ಮೈಸೂರು: ಮೈಸೂರಿನ ಉದ್ಯಮಿಯೋರ್ವರನ್ನು ಅಪಹರಿಸಿ ಹಣಕ್ಕಾಗಿ ಬೇಡಿಕೆ ಇಟ್ಟಿದ್ದ ಕಿಡ್ನಾಪರ್‌ಗಳನ್ನು ಬಂಧಿಸಿ, ಅಪಹರಣವಾಗಿದ್ದವರನ್ನು ರಕ್ಷಿಸುವಲ್ಲಿ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ. ಉದ್ಯಮಿ ಲೋಕೇಶ್ ಎಂಬುವರೇ ಅಪಹರಣಕ್ಕೆ ಒಳಗಾಗಿ ರಕ್ಷಿಸಲ್ಪಟ್ಟ ವ್ಯಕ್ತಿ.


ಈ ಪ್ರಕರಣದ ಆರೋಪಿಗಳಾದ ಹೆಚ್.ಎಂ. ಸಂತೋಷ್, ಹೆಚ್.ಎಸ್ ಅಭಿಷೇಕ್, ಆರ್. ಪ್ರಜ್ವಲ್ ಮತ್ತು ಬಿ.ಎನ್. ದರ್ಶನ್ ಅವರನ್ನು ಬಂಧಿಸಲಾಗಿದ್ದು, ಕುಟುಂಬದ ಸದಸ್ಯರಿಂದ ಹಣ ಪಡೆಯಲು ಹೋಗಿದ್ದ ಪ್ರೀತಮ್ ಎಂಬ ವ್ಯಕ್ತಿಗಾಗಿ ಶೋಧನೆ ನಡೆಯುತ್ತಿದೆ.

ಡಿ.6ರಂದು ರಾತ್ರಿ 8.15ರಲ್ಲಿ ವಿಜಯನಗರ 3ನೇ ಹಂತದಲ್ಲಿರುವ ಹೆರಿಟೇಜ್ ಕ್ಲಬ್‌ನಿಂದ ಮನೆಗೆ ತೆರಳು ಹೊರಗೆ ಬಂದಾಗ ಸ್ವಲ್ಪ ದೂರದಲ್ಲಿ ಲೋಕೇಶ್ ಮೇಲೆ ಸಂತೋಷ್ ಹಲ್ಲೆ ನಡೆಸಲು ಮುಂದಾದ ತಕ್ಷಣ ಇನ್ನೂ ನಾಲ್ವರು ಸೇರಿಕೊಂಡು ಕಣ್ಣಿಗೆ ಕಾರದ ಪುಡಿ ಎರಚಿ ಟಾಟಾ ಸುಮೊ ಕಾರಿನಲ್ಲಿ ಅಪಹರಿಸಿದ್ದಾರೆ. ನಂತರ ಅವರ ಪತ್ನಿಗೆ ಮೊಬೈಲ್ ಕರೆ ಮಾಡಿ 1 ಕೋಟಿ ರೂ. ಗಳ ಹಣ ನೀಡಬೇಕು. ಇಲ್ಲದಿದ್ದರೆ ನಿನ್ನ ಪತ್ನಿಯನ್ನು ಕೊಲೆ ಮಾಡುವುದಾಗಿ ಬೆದರಿಸಿದ್ದಾರೆ.

ಈ ಬಗ್ಗೆ ಉದ್ಯಮಿಯ ಪತ್ನಿ ವಿಜಯನಗರ ಪೊಲೀಸ್ ಠಾಣೆಗೆ ದೂರು ನೀಡುತ್ತಿದ್ದಂತೆಯೆ ಕಾರ್ಯಪ್ರವೃತ್ತರಾದ ಪೊಲೀಸರು ಹೆರಿಟೇಜ್ ಕ್ಲಬ್ ಬಳಿ ಆಗಮಿಸಿ ಪರಿಶೀಲನೆ ನಡೆಸಲಾಗಿ ಸ್ಥಳದಲ್ಲಿ ಅಪಹರಣಗೊಂಡಿದ್ದ ಲೋಕೇಶ್‌ನ ಚಪ್ಪಲಿ ಮತ್ತು ಕಾರದ ಪುಡಿ ಕಂಡು ಬಂದಿದೆ. ತಕ್ಷಣ ಕಾರ್ಯಾಚರಣೆಗೆ ಪುಟ 02

## ಮೈಸೂರಲ್ಲಿ ಎಸ್.ಎಲ್.ಭೈರಪ್ಪ ಸ್ಮಾರಕ

### — ಮುಖ್ಯಮಂತ್ರಿ ಸಿದ್ದರಾಮಯ ಘೋಷಣೆ —



ಬೆಳಗಾವಿ:– ಇತ್ತೀಚೆಗೆ ನಿಧನರಾದ ಸಾಹಿತಿ ಎಸ್.ಎಲ್.ಭೈರಪ್ಪ ಅವರ ಸ್ಮಾರಕವನ್ನು ಮೈಸೂರಿನಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಸೋಮವಾರ ಆರಂಭವಾದ ವಿಧಾನಸಭೆ ಕಲಾಪದಲ್ಲಿ ಅಗಲಿದ ಗಣ್ಯರಿಗೆ ಸಂತಾಪ ಸೂಚನಾ ನಿರ್ಣಯ ಬೆಂಬಲಿಸಿ ಮಾತನಾಡಿದ ಅವರು, ಭೈರಪ್ಪ ಅವರ ಸ್ಮಾರಕ ನಿರ್ಮಿಸಲು ನಿರ್ಧರಿಸಲಾಗಿದೆ. ಅಲ್ಲದೆ, ಸಾಲುಮರದ ತಿಮ್ಮಕ್ಕ ಅವರ ಹೆಸರಿನಲ್ಲಿ ಮುಂದಿನ ವರ್ಷದಿಂದ ಪರಿಸರ ಪ್ರಶಸ್ತಿ ನೀಡಲಾಗುವುದು ಎಂದರು.

ಸಾಲುಮರದ ತಿಮ್ಮಕ್ಕ ಅವರ ಗುಣಗಾನ ಮಾಡಿದ ಮುಖ್ಯಮಂತ್ರಿಯವರು, ಬೇಲೂರಿನಲ್ಲಿ ತಿಮಕ್ಕ ಅವರ ವಸ್ತು ಸಂಗ್ರಹಾಲಯ ಸ್ಥಾಪಿಸಲಾಗುವುದು ಮತ್ತು ಮುಂದಿನ ವರ್ಷದಿಂದ ಸಾಲುಮರದ ತಿಮ್ಮಕ್ಕ ಹೆಸರಿನಲ್ಲಿ ಪರಿಸರ ಪ್ರಶಸ್ತಿ ಕೂಡ ನೀಡಲು ತೀರ್ಮಾನಿಸಲಾಗದೆ ಎಂದು ಹೇಳಿದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಸಾಲುಮರದ ತಿಮ್ಮಕ್ಕ ನಮ್ಮ ಜೊತೆ ಇಲ್ಲದೇ ಪುಟ 02

## ಕೇಬಲ್ ಟಿವಿ ಆಪರೇಟರ್ ಶುಲ್ಕ ಶೇ.50 ರಷ್ಟು ಕಡಿತ: ಕೆ.ಜೆ.ಜಾರ್ಜ್



ಬೆಳಗಾವಿ:– ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕೇಬಲ್ ಟಿವಿ ಆಪರೇಟರ್‌ಗಳಿಗೆ ವಿಧಿಸಲಾಗುತ್ತಿರುವ ಶುಲ್ಕವನ್ನು ಶೇ.50ರಷ್ಟು ಕಡಿಮೆ ಮಾಡಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಪ್ರಕಟಿಸಿದರು.

ವಿಧಾನಪರಿಷತ್‌ನಲ್ಲಿ ಸದಸ್ಯರಾದ ಬಲ್ಕಿಸ್ ಭಾನು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿ ಕೇಬಲ್ ಟಿವಿ ಆಪರೇಟರ್‌ಗಳಿಗೆ ಇಂಧನ ಇಲಾಖೆಯ ವಿದ್ಯುತ್ ಕಂಬಗಳನ್ನು ಬಳಸಿಕೊಂಡಲ್ಲಿ ಅವರಿಗೆ 150 ರೂ. ಶುಲ್ಕ ವಿಧಿಸಲಾಗುತ್ತಿತ್ತು. ಈ ಶುಲ್ಕವು ಆರ್ಥಿಕವಾಗಿ ಹೆಚ್ಚಿನ ಹೊರೆಯಾಗುತ್ತಿದ್ದರಿಂದ ಕಡಿಮೆ ಮಾಡಬೇಕೆಂದು ಹಲವು ಬಾರಿ ಮನವಿ ಮಾಡಿದ್ದರು. ಹೀಗಾಗಿ ಹಾಲಿ ಇರುವ ಶುಲ್ಕದಲ್ಲಿ ಶೇ.50ರಷ್ಟು ರಿಯಾಯಿತಿ ಅಂದರೆ 150 ರೂ. ಬದಲಿಗೆ ಇನ್ನು ಮುಂದೆ 75 ರೂ. ಶುಲ್ಕ ವಿಧಿಸುವುದಾಗಿ ಘೋಷಣೆ ಮಾಡಿದರು. ಪುಟ 02

## ಡಿ.17ಕ್ಕೆ ಮಳವಳ್ಳಿಗೆ ರಾಷ್ಟ್ರಪತಿ: ಡಿಸಿ ಭೇಟಿ-ಪರಿಶೀಲನೆ



ಮಂಡ್ಯ:– ಮಳವಳ್ಳಿ ಪಟ್ಟಣದಲ್ಲಿ ನಡೆಯುತ್ತಿರುವ ಸುತ್ತೂರಿನ ಶಿವರಾತ್ರಿ ಶಿವಯೋಗಿಗಳರವರ 1066 ನೇ ಜಯಂತಿ ಮಹೋತ್ಸವ ಉದ್ಘಾಟನೆಗೆ ಡಿ.17 ರಂದು ರಾಷ್ಟ್ರಪತಿ ದ್ರೌಪತಿ ಮುರ್ಮು ಆಗಮಿಸುವ ಹಿನ್ನೆಲೆಯಲ್ಲಿ ಹೆಲಿಪ್ಯಾಡ್,ವೇದಿಕೆ ಹಾಗೂ ಇತರೆ ಸ್ಥಳಗಳನ್ನು ಇಂದು ಮೈಸೂರು ದಕ್ಷಿಣ ವಲಯ ಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಡಾ.ಕುಮಾರ ಸೇರಿದಂತೆ ಇತರೆ ಅಧಿಕಾರಿಗಳು ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ನಡೆಸಿದರು.

ಪಟ್ಟಣದ ಹೊರ ಭಾಗದ ಮಾರೇಹಳ್ಳಿ ಬಳಿ ನಿರ್ಮಿಸುತ್ತಿರುವ ಹೆಲಿಪ್ಯಾಡ್‌ಗೆ ತೆರಳಿ ಗ್ರೀನ್ ರೂಂ ನಿರ್ಮಾಣ,ವಿದ್ಯುತ್ ಕಂಬಗಳ ತೆರವು, ಜಾಗ ಸಮತಟ್ಟಾಗಿ ಸುವುದು, ಕಾರ್ಯಕ್ರಮಕ್ಕೆ ರಾಷ್ಟ್ರಪತಿಗಳನ್ನು ತೆರಳುವ ಮಾರ್ಗ, ಮೂಲಭೂತ ಸೌಲಭ್ಯಗಳ ಅಳವಡಿಕೆ ಕುರಿತು ತೆಗೆದುಕೊಂಡಿರುವ ಕ್ರಮಗಳ ಚರ್ಚೆ ನಡೆಸಿದರು.

ನಂತರ ಪ್ರವಾಸಿ ಮಂದಿರ, ತಾಲ್ಲೂಕು ಆಸ್ಪತ್ರೆಗೆ ಬೇಟಿ ನೀಡಿ ಆಡಳಿತಾಧಿಕಾರಿಗಳ ಜೊತೆಗೆ ಚರ್ಚೆ ನಡೆಸಿ ದಿನದ 24 ಗಂಟೆಗಳಲ್ಲಿಯೂ ಆರೋಗ್ಯ ಸಿಬ್ಬಂದಿಗಳು ಲಭ್ಯವಾಗಿರಬೇಕು, ತುರ್ತು ಚಿಕಿತ್ಸೆಗೆ ಬೇಕಾದ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಡಾ.ಸಂಜಯ್ ಹಾಗೂ ತಾಲ್ಲೂಕು ವೈದ್ಯಾಧಿಕಾರಿ ಡಾ.ವೀರಭದ್ರಪ್ಪ ಅವರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಡಿ.17ರಿಂದ 21 ರವರಗೆ ನಡೆಯಲಿರುವ ಜಯಂತೋತ್ಸವಕ್ಕೆ ರಾಷಪತಿಗಳು, ಪುಟ 02

# ಹಾಸ್ಟೆಲ್ ಮತ್ತು ಶಾಲೆಗಳಿಗೆ ಜಿ.ಪಂ ಸಿಇಓ ಭೇಟಿ ನೀಡಿ ಪರಿಶೀಲನೆ

ಮಂಡ್ಯ:– ನಿಲಯ ಪೋರ್ಟಲ್ ನಲ್ಲಿ ವಸತಿ ನಿಲಯಗಳಲ್ಲಿನ ಮೂಲಭೂತ ಸೌಲಭ್ಯಗಳಿಗೆ ಸಂಬಂಧಿಸಿದಂತೆ 60 ಪ್ರಶ್ನಾವಳಿ ಗಳಿದ್ದು, ಈ ಎಲ್ಲಾ ಪ್ರಶ್ನಾವಳಿಗಳನ್ನು ಕಾಲ ಕಾಲಕ್ಕೆ ಭರ್ತಿ ಮಾಡಿ ವಸತಿ ನಿಲಯಗಳಲ್ಲಿನ ಸೌಲಭ್ಯಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್. ನಂದಿನಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮದ್ದೂರಿನ ಸೋಮನಹಳ್ಳಿ ಯಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು ಹಾಸ್ಟೆಲ್ ನಲ್ಲಿ ನಿಗದಿತ ಮೆನು ಪ್ರಕಾರ ಗುಣಮಟ್ಟದ ಶುಚಿ,ರುಚಿಯಾದ ಊಟ ಒದಗಿಸಬೇಕು.ಆಹಾರ ತಪಾಸಣೆ ಮಾಡಿಸಬೇಕು, ಸುರಕ್ಷತೆ, ಭದ್ರತೆ ಕಾಯ್ದುಕೊಳ್ಳಬೇಕು ಎಂದು ಸೂಚನೆ ನೀಡಿದರು.

ವಸತಿ ನಿಲಯದಲ್ಲಿನ ವಿದ್ಯಾರ್ಥಿಗಳು ಮೊಬೈಲ್ ಬಳಕೆ, ಆನ್ಲೈನ್ ಗೇಮ್ ನಂತಹ ಇತರೆ ಯಾವುದೇ ಚಟುವಟಿಕೆಯಲ್ಲಿ ತೊಡಗಿಸಿ ಕೊಂಡಿರಬಾರದು. ವಾರ್ಡನ್ ಗಳು ವಿದ್ಯಾರ್ಥಿಗಳ ಮೇಲೆ ನಿಗಾ ವಹಿಸಬೇಕು, ಅವರನ್ನು ಸರಿಯಾದ ಮಾರ್ಗದಲ್ಲಿ ಕರೆದುಕೊಂಡು ಹೋಗುವಂತಹ ಕೆಲಸ ಮಾಡಬೇಕೆಂದು ಎಂದು ವಸತಿ ನಿಲಯದ ವಾರ್ಡನ್ ರವರಿಗೆ ತಿಳಿಸಿದರು.

**ಸಹಾಯವಾಣಿ ಸಂಖ್ಯೆಯನ್ನು ಅಳವಡಿಸಲು ಸೂಚನೆ:** ವಸತಿ ನಿಲಯಗಳಲ್ಲಿನ ಕುಂದು ಕೊರತೆಗಳ ಬಗ್ಗೆ ದೂರು ದಾಖಲಿಸಲು ಸಹಾಯವಾಣಿ ಸಂಖ್ಯೆ 9480872008 ಅನ್ನು ನೀಡಲಾಗಿದ್ದು, ಸದರಿ ಸಂಖ್ಯೆಯನ್ನು ವಸತಿ ನಿಲಯದ ಅಡುಗೆ ಮನೆ, ನೋಟೀಸ್ ಬೋರ್ಡ್, ಶಾಲೆಯ ಮುಖ್ಯ ದ್ವಾರ ಸೇರಿದಂತೆ ಇತರೆ ಕಡೆಗಳಲ್ಲಿ ಡಿಸೆಂಬರ್ 31ರೊಳಗೆ ಪ್ರದರ್ಶನ ಮಾಡಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲೆಯ ಎಲ್ಲಾ ಶಾಲೆಯ ಅಡುಗೆ ಕೋಣೆಯ ಹತ್ತಿರ ಡಿಸೆಂಬರ್ 31ರೊಳಗೆ ಸಹಾಯವಾಣಿ ಸಂಖ್ಯೆ 9480872008 ಅನ್ನು ಅಳವಡಿಸ ಬೇಕು. ಆಹಾರ ಸಾಮಾಗ್ರಿಗಳ ಗುಣಮಟ್ಟ ಹಾಗೂ ಆಹಾರದ ಗುಣಮಟ್ಟಕ್ಕೆ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಈ ಸಹಾಯವಾಣಿಗೆ ಕರೆ ಮಾಡಿ ದೂರು ದಾಖಲಿಸಬಹುದು ಎಂದು ತಿಳಿಸಿದರು.

**ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ಗಮನ ಹರಿಸಿ:** ಸೋಮನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಎಲ್ಲಾ ಮಕ್ಕಳು ಒಂದೇ ರೀತಿಯಲ್ಲಿ ಇರುವುದಿಲ್ಲವಾದ್ದರಿಂದ ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ವಿಶೇಷ ಆಸಕ್ತಿ ವಹಿಸಿ ಪಾಠ ಮಾಡಬೇಕು ಎಂದು ಶಾಲೆಯ ಶಿಕ್ಷಕರಿಗೆ ಸೂಚಿಸಿದರು.

7ನೇ ತರಗತಿಯ ಮಕ್ಕಳು ಸಂವಿಧಾನದ ಪೀಠಿಕೆಯನ್ನು ನೋಡದೆಯೇ ಹೇಳಿದ್ದು, ಈ ಬಗ್ಗೆ ಸಿಇಓ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಆದರೆ, ಕೆಲವು ಮಕ್ಕಳು ಕನ್ನಡ ಪಠ್ಯವನ್ನು ಓದಲು ಕಷ್ಟಪಡುತ್ತಿದ್ದು, ಅಂತಹ ಮಕ್ಕಳಿಗೆ ಶಾಲೆಯ ಪ್ರಾರಂಭ ಹಾಗೂ ಶಾಲೆಯ ಮುಕ್ತಾಯದ ನಂತರವೂ ವಿಶೇಷ ಗಮನಹರಿಸಿ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನದ ಕಲಿಕೆಯನ್ನು ಉತ್ತಮಗೊಳಿಸಲು ಕ್ರಮವಹಿಸಬೇಕು. 7ನೇ ತರಗತಿಯಿಂದಲೇ ಮಕ್ಕಳನ್ನು 10ನೇ ತರಗತಿಗೆ ತಯಾರಾಗುವಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳ ಬೇಕು ಎಂದು ತಿಳಿಸಿದರು.

**ಬಿಸಿಯೂಟ ಯೋಜನೆಯಡಿ ಗುಣಮಟ್ಟದ ಆಹಾರ ಒದಗಿಸಿ:** ಶಾಲೆಯ ಅಡುಗೆ ಕೋಣೆಯ ಸುತ್ತಮುತ್ತ ಶುಚಿತ್ವ ಕಾಪಾಡಿಕೊಳ್ಳ ಬೇಕು. ಮಕ್ಕಳಿಗೆ ಪ್ರತಿದಿನ ಪೌಷ್ಠಿಕ ಆಹಾರ ನೀಡಬೇಕು. ಆಹಾರವು ಗುಣಮಟ್ಟದಿಂದ ಕೂಡಿರಬೇಕು ಹಾಗೂ ವಿದ್ಯಾರ್ಥಿಗಳಿಗೆ ಶುಚಿಯಾದ ಮತ್ತು ರುಚಿಯಾದ ಆಹಾರ ಒದಗಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಮೊಟ್ಟೆ ನೀಡುತ್ತಿರುವ ಬಗ್ಗೆ ರಿಜಿಸ್ಟರ್ ಅನ್ನು ಪರಿಶೀಲಿಸಿದರು. ಪ್ರತಿ ದಿನ ಮೊಟ್ಟೆ ನೀಡುವ ಬಗ್ಗೆ ಹಾಗೂ ಯಾವ ದಿನ ಯಾವ ವಿದ್ಯಾರ್ಥಿ ಮೊಟ್ಟೆ ಸೇವಿಸುವುದಿಲ್ಲ ಎಂಬ ಬಗ್ಗೆ ಪೋಷಕರಿಂದ ಪತ್ರ ಬರೆಸಿಕೊಳ್ಳ ಬೇಕು ಹಾಗೂ ಯಾವುದೇ ಕಾರಣಕ್ಕೂ ಅಂಕಿ–ಅಂಶದಲ್ಲಿ ಹಾಗೂ ನೀಡುತ್ತಿರುವ ಆಹಾರದಲ್ಲಿ ವ್ಯತ್ಯಾಸ ಆಗದಂತೆ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಶಿಕ್ಷಕರಿಗೆ ತಿಳಿಸಿದರು.

**ನಮ್ಮ ನಡಿಗೆ ಅಕ್ಷರ ದಾಸೋಹದ ಅಡುಗೆ ಮನೆ ಕಡೆಗೆ ಅಭಿಯಾನ:** ಅಕ್ಷರ ದಾಸೋಹ ಯೋಜನೆಯಡಿ ಪೂರೈಕೆ ಮಾಡಲಾಗುತ್ತಿರುವ ಆಹಾರ ಸಾಮಾಗ್ರಿಗಳ ಗುಣಮಟ್ಟ, ಆಹಾರದ ಗುಣಮಟ್ಟ, ಆಹಾರ ಪದಾರ್ಥಗಳ ಸಂರಕ್ಷಣೆಯ ವಿಧಾನ, ಅಡುಗೆ ಕೋಣೆಯ ಶುಚಿತ್ವ, ಮೊಟ್ಟೆ ವಿತರಣೆಯ ಅಂಕಿ ಅಂಶಗಳ ಪರಿಶೀಲನೆ ಸೇರಿದಂತೆ ಇತರೆ ವಿಷಯಗಳ ಕುರಿತು ಪರಿಶೀಲಿಸಿ ವರದಿ ಸಲ್ಲಿಸಲು ಶಾಲಾ ಶಿಕ್ಷಣ ಇಲಾಖೆಯ ಬಿ.ಆರ್.ಸಿ., ಸಿ.ಆರ್.ಸಿ., ಬಿಇಓ, ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ನಮ್ಮ ನಡಿಗೆ ಅಕ್ಷರ ದಾಸೋಹದ ಅಡುಗೆ ಮನೆ ಕಡೆಗೆ ಅಭಿಯಾನದಡಿ ಶಾಲೆಗಳಿಗೆ ಭೇಟಿ ನೀಡಿ ವರದಿ ಸಲ್ಲಿಸಲು ಕ್ರಮವಹಿಸಬೇಕು ಎಂದು ಈಗಾಗಲೇ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮಂಜುಳಾ,ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಲೋಕೇಶ್,ಅಕ್ಷರ ದಾಸೋಹ ಯೋಜನೆಯ ಶಿಕ್ಷಣಾಧಿಕಾರಿ ರವಿಕುಮಾರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ, ಮದ್ದೂರು ತಾಲ್ಲೂಕು ಕ್ಷೇತ ಶಿಕ್ಷಣಾಧಿಕಾರಿ ಧನಂಜಯ್, ಸೋಮನಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಕಾಡುಪ್ರಾಣಿಗಳ ಹಾವಳಿ ತಡೆಗೆ ಆಗ್ರಹಿಸಿ ಪ್ರತಿಭಟನೆ

## ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯಿಂದ ಧರಣಿ

ಚಾಮರಾಜನಗರ:– ತಾಲೂಕಿನ ಹೆಗ್ಗೋತಾರ, ಕಲ್ಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ಹಾವಳಿಯನ್ನು ತಡೆಗಟ್ಟುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.



ನಗರದ ಸುಲ್ತಾನ್ ಷರೀಫ್ ವೃತ್ತದಲ್ಲಿರುವ ಚಾಮರಾಜನಗರ ವಲಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು, ಕೆಲಕಾಲ ಧರಣಿ ನಡೆಸಿದರು. ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ ಮಾತನಾಡಿ, ಚಾಮರಾಜನಗರ ತಾಲೂಕಿನ ವ್ಯಾಪ್ತಿಯಲ್ಲಿ ಹುಲಿ, ಚಿರತೆ ಹಾಗೂ ಇನ್ನಿತರೆ ಕಾಡುಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ಪರಿಣಾಮವಾಗಿ ಕಳೆದ2 ತಿಂಗಳಲ್ಲಿ 6–7 ಜಾನುವಾರುಗಳು ಕಾಡುಪ್ರಾಣಿಗಳ ದಾಳಿಗೆ ಮೃತಪಟ್ಟಿದೆ. ಆದರೆ ಈ ವರೆಗೂ ಕಾಡುಪ್ರಾಣಿಗಳನ್ನು ಸೆರೆ ಹಿಡಿಯುವಲ್ಲಿ ಅರಣ್ಯ ಇಲಅಖೆ ವಿಲವಾಗಿದೆ ಎಂದು ದೂರಿದರು.

ಚಾಮರಾಜನಗರ ವಲಯ ವ್ಯಾಪ್ತಿಯಲ್ಲಿ ಸಿಸಿಎ ಇಲ್ಲದೇ ಇರುವುದು, ಸಿಬ್ಬಂದಿಗಳ ಕೊರತೆಯಿಂದ ಇಂತಹ ಪ್ರಕರಣಗಳು ಮರುಕಳಿಸುತ್ತಿದೆ. ಮತ್ತೊಂದು ಕಡೆ ಕಾಡುಪ್ರಾಣಿಗಳನ್ನು ಸೆರೆ ಹಿಡಿಯಲು ಬೇಕಾದ ಪರಿಕರಗಳ ಕೊರತೆಯೂ ಎದ್ದು ಕಾಣುತ್ತಿದೆ. ಸರ್ಕಾರ ಈಗಲಾದರೂ ಎಚ್ಚೆತ್ತುಕೊಂಡು ಅರಣ್ಯ ಸಿಬ್ಬಂದಿಗಳನ್ನು ನೇಮಕ ಮಾಡಬೇಕು. ಅಗತ್ಯ ಪರಿಕರಗಳನ್ನು ಪೂರೈಕೆ ಮಾಡಬೇಕು. ಈ ಮೂಲಕ ಜಾನುವಾರುಗಳನ್ನು ರಕ್ಷಣೆ ಮಾಡಬೇಕು. ಇಲ್ಲವಾದರೇ ಜಿಲ್ಲಾ ಉಸ್ತವಾರಿ ಸಚಿವರು ಹಾಗೂ ಮುಖ್ಯಮಂತ್ರಿಗಳು ಜಿಲ್ಲೆಗೆ ಭೇಟಿನೀಡಿದಾಗ ಘೇರಾವ್ ಹಾಕಲಾಗುವುದು ಎಂದು ಎಚ್ಚರಿಸಿದರು.

ರೈತ ಸಂಘದ ಸಂಘಟನಾ ಕಾರ್ಯದರ್ಶಿ ವಿಜಯ್‌ಕುಮಾರ್ ಮಾತನಾಡಿ, ನಮ್ಮ ಭಾಗದಲ್ಲಿ ಕಾಡುಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ಇಲಾಖೆಯ ಗಮನಕ್ಕೆ ತಂದರೆ ಸಿಬ್ಬಂದಿಗಳ ಕೊರತೆ ಎನ್ನುತ್ತಾರೆ. ಮುಖ್ಯವಾಗಿ ಚಾಮರಾಜನಗರ ವಲಯದ ಸಿಸಿಎ ಹುದ್ದೆ ಖಾಲಿ ಇದೆ. ಈ ಭಾಗದ ಸಂಸದರು, ಶಾಸಕರು ಇತ್ತ ಗಮನಹರಿಸಿ ಅರಣ್ಯ ಇಲಾಖೆಯ ಸಮಸ್ಯೆಗಳನ್ನು ಬಗೆಹರಿಸಬೇಕು. ಕಾಡುಪ್ರಾಣಿಗಳ ದಾಳಿಯಿಂದ ಜಾನುವಾರುಗಳು ಹತ್ಯೆಯಾಗುತ್ತಿರುವುದನ್ನು ತಪ್ಪಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಕುಮಾರ್ ಮೇಲಾಜಿಪುರ, ರಘು ಕಲ್ಪುರ, ಮಹೇಶ್, ಮುರುಗೇಂದ್ರಸ್ವಾಮಿ, ಲೋಕೇಶ್ ಹಳೇಪುರ, ಮಹೇಶ್, ತಮ್ಮಯಪ್ಪ, ದೊರೆಸ್ವಾಮಿ, ಸಂಜಯ್ ಹಾಗೂ ಇತರರಿದ್ದರು.

# ಸಾರ್ವಜನಿಕರು ಕಾನೂನು ಪಾಲನೆ ಮಾಡಬೇಕು: ಎನ್.ಚಲುವರಾಯಸ್ವಾಮಿ

ನಾಗಮಂಗಲ:– ಸಾರ್ವಜನಿಕರು ಕಾನೂನಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಹೇಳಿದರು.

ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ನೂತನ ಗ್ರಾಮ ಪಂಚಾಯಿತಿ ಕಟ್ಟಡ, ಪೊಲೀಸ್ ಹೊರ ಠಾಣೆ ಹಾಗೂ ನೂತನ ಅಂಗನವಾಡಿ ಕಟ್ಟಡ ಉದ್ಘಾಟನಾ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

ಜಗತ್ತಿನಲ್ಲಿ ಅತ್ಯಂತ ಹೆಚ್ಚುವ ಬಾರಿ ಕಾನೂನು ನಿಯಮಗಳನ್ನು ಭಾರತ ಉಲ್ಲಂಘಿಸುತ್ತ ಬರುತ್ತಿದೆ ಅದರಲ್ಲೂ ಕರ್ನಾಟಕದಲ್ಲಿ ಹೆಚ್ಚು ಬಾರಿ ಕಾನೂನು ನಿಯಮಗಳು ಉಲ್ಲಂಘನೆ ಮಾಡಲಾಗಿದೆ. ಕಾನೂನು ನಿಯಮಗಳಿರುವುದು ಸಾರ್ವಜನಿಕರ ಹಿತ ಕಾಯಲು ಸಾರ್ವಜನಿಕರು ಪ್ರಾಮಾಣಿಕವಾಗಿ ಕಾನೂನು ನಿಯಮಗಳನ್ನು ಪಾಲಿಸಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ರಸ್ತೆಗಳಲ್ಲಿ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಸಾರ್ವಜನಿಕರು ಹೆಲ್ಮೆಟ್ ಧರಿಸದೆ ವಾಹನ ಚಾಲಾಯಿಸುತ್ತಿರಿ. ಪೊಲೀಸ್ ಇಲಾಖೆ ಹೆಲ್ಮೆಟ್ ಧರಿಸಲು ಸೂಚಿಸಿದರೆ ಅದನ್ನು ಅಪರಾಧಂತೆ ಕಾಣುತ್ತೀರಿ.

ಕಳೆದ ವರ್ಷ ಯುವತಿಯೊಬ್ಬಳು ಹೆಲ್ಮೆಟ್ ಧರಿಸದೆ ಪ್ರಾಣ ಕಳೆದುಕೊಂಡಳು ಅವಳ ಮನೆಯವರು ಹೆಲ್ಮೆಟ್ ಧರಿಸಿದ್ದರೆ ಸಾವು ಸಂಭವಿಸುತ್ತಿರಲಿಲ್ಲ ಎಂದು ಸಂತಪಾ ವ್ಯಕ್ತಪಡಿಸಿದರು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ,ಮಾಜಿ ಶಾಸಕ ಮನ್ ಮುಲ್ ನಿರ್ದೇಶಕ ಅಪ್ಪಾಜಿಗೌಡ, ಎಎಸ್ಪಿ ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಹುಚ್ಚೇಗೌಡ ಇತರರಿದ್ದರು.



# ಚಿರತೆ ದಾಳಿ: 4 ಕುರಿಗಳು ಸಾವು

ಮದ್ದೂರು:– ತಾಲೂಕಿನಲ್ಲಿ ಚಿರತೆ ಹಾವಳಿ ಮುಂದುವರೆದಿದ್ದು, ಚಿರತೆ ದಾಳಿಗೆ ಬರೋಬ್ಬರಿ 4 ಕುರಿಗಳು ಸಾವನ್ನಪ್ಪಿದ್ದು, ಮತ್ತೆರಡು ಕುರಿಗಳು ಗಂಭೀರ ಗಾಯಗೊಂಡಿರುವ ಘಟನೆ ತಾಲೂಕಿನ ವಳಗೆರೆಹಳ್ಳಿ ಯಲ್ಲಿ ಜರುಗಿದೆ.

ತಾಲೂಕಿನ ವಳಗೆರೆಹಳ್ಳಿ ಶ್ರೀನಿವಾಸ್ ಎಂಬುವವರ ಮನೆಯ ಹಿಂಭಾಗದ ಕೊಟ್ಟಿಗೆಗೆ ಭಾನುವಾರ ರಾತ್ರಿ 8.30 ರ ಸುಮಾರಿಗೆ ಮನೆ ಪಕ್ಕದ ಕುರಿ ಮಂದೆಗೆ ನುಗ್ಗಿ ಚಿರತೆಯೊಂದು 18 ಕುರಿಗಳ ಪೈಕಿ 6 ಕುರಿಗಳ ಮೇಲೆ ದಾಳಿ ಮಾಡಿದೆ. ಕುರಿಗಳ ಚೀರಾಟದಿಂದ ಕೊಟ್ಟಿಗೆಗೆ ಬಂದ ಶ್ರೀನಿವಾಸ್ ಚಿರತೆ ದಾಳಿ ಮಾಡುತ್ತಿರುವುದು ಕಂಡು ಬಂದಿದೆ. ಕೂಗಾಟ ಚೀರಾಟ ನಡೆಸಿದ ಪರಿಣಾಮ ಚಿರತೆ ಅಲ್ಲಿಂದ ಪರಾರಿಯಾಗಿದೆ. ಆದರೆ, ಅಷ್ಟರಲ್ಲಿ 4 ಕುರಿಗಳು ಸಾವನ್ನಪ್ಪಿ 2 ಕುರಿಗಳು ಗಾಯಗೊಂಡಿದ್ದು, ಸಾವು ಬದುಕಿನ ನಡುವೆ ಹೋರಾಟ ಮಾಡುತ್ತಿವೆ.

ಸ್ಥಳಕ್ಕೆ ವಲಯ ಅರಣ್ಯಾಧಿಕಾರಿ ಗವಿಯಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ನಂತರ ಗವಿಯಪ್ಪ ಮಾತನಾಡಿ, ಚಿರತೆ ಸೆರೆಗೆ ಅಗತ್ಯವಿರುವ ಕಡೆಗಳಲ್ಲಿ ಈಗಾಗಲೆ ಹಲವಾರು ಗ್ರಾಮಗಳಲ್ಲಿ ಬೋನನ್ನು ಇರಿಸಲಾಗಿದ್ದು, ಹಲವಾರು ಚಿರತೆಗಳನ್ನು ಸೆರೆಹಿಡಿದು ಮೇಲಾಧಿಕಾರಿಗಳ ಆದೇಶದ ಮೇರೆಗೆ ಅರಣ್ಯ ಪ್ರದೇಶಕ್ಕೆ ಬಿಡಲಾಗಿದೆ. ಇಲಾಖೆ ವತಿಯಿಂದ ಚಿರತೆ ಸೆರೆ ಹಿಡಿಯಲು ಅಗತ್ಯ ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು.

# ಭೇಟಿ-ಪರಿಶೀಲನೆ

ಮುಖ್ಯಮಂತ್ರಿ ಸೇರಿದಂತೆ ಝುಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಚಿವರು ಕಾರ್ಯಕ್ರಮಕ್ಕೆ ಆಗಮಿಸುವ ಹಿನ್ನೆಲೆಯಲ್ಲಿ ಸಾರ್ವಜನಿಕರ ವಾಹನಗಳ ಪಾರ್ಕಿಂಗ್ ವ್ಯವಸ್ಥೆ, ಗಣ್ಯ ವ್ಯಕ್ತಿಗಳ ವಾಸ್ತವ್ಯಕ್ಕೆ ತಾಲೂಕು ವ್ಯಾಪ್ತಿಯ ಎಲ್ಲಾ ಲಾಡ್ಜ್, ಕಲ್ಯಾಣ ಮಂಟಪಗಳ, ರೆಸಾರ್ಟ್ಸ್ ಗಳ, ರೂಮುಗಳನ್ನು ಕಾಯ್ದಿರಿಸುವುದು, ಕಾನೂನು ಸುವ್ಯವಸ್ಥೆಗೆ ದಕ್ಕೆ ಬರದಂತೆ ಫ್ಲೆಕ್ಸ್ ಬ್ಯಾನರ್ ಅಳವಡಿಕೆ, ಸೂಕ್ತ ಪೊಲೀಸ್ ಬಂದೋಬಸ್ ವ್ಯವಸ್ಥೆ ಕುರಿತು ಎಚ್ಚರಿಕೆ ವಹಿಸಬೇಕೆಂದು ಪೊಲೀಸ್ ಅಧಿಕಾರಿಗಳಿಗೆ ಸಲಹೆ ನೀಡಿದರು.

ಸುತ್ತೂರು ಜಯಂತಿ ನಡೆಯುವ ವೇದಿಕೆ ಬಳಿ ಪರಿಶೀಲನೆ ನಡೆಸಿ ವೇದಿಕೆ ಅಳತೆ, ಗಣ್ಯರ ಆಗಮನದ ಮುಖ್ಯದ್ವಾರ, ಪಾರ್ಕಿಂಗ್, ಊಟದ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ , ಎಸಿ ಶಿವಮೂರ್ತಿ ತಹಸಿಲ್ದಾರ್ ಲೋಕೇಶ್, ಪುರಸಭೆ ಮುಖ್ಯ ಅಧಿಕಾರಿ ನಾಗರತ್ನ, ಲೋಕೋಪ ಯೋಗಿ ಇಂಜಿನಿಯರ್ ಸೋಮಶೇಖರ್, ಸೆಸ್ಕ್ ಕಾರ್ಯಪಾಲಕ ಎಂಜಿನಿಯರ್ ಪ್ರೇಮ್ ಕುಮಾರ್, ಗ್ರಾಮಾಂತರ ವೃತ್ತ ನಿರೀಕ್ಷಕ ಶ್ರೀಧರ್, ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ,ಜಯಂತಿ ಮಹೋತ್ಸವದ ವಿದ್ಯಾ ಪೀಠದ ಅಧಿಕಾರಿಗಳು ಉಪಸ್ಥಿತರಿದ್ದರು.

# 82 ಲಕ್ಷ ರೂ. ವಂಚನೆ

ಹೆದರಿಸಿದ್ದಾನೆ. ನಂತರ ನಿಮ್ಮ ಹಣ ಹಾಗೂ ಆಸ್ತಿಯನ್ನು ಪರಿಶೀಲಿಸಿದ ನಂತರ ಎನ್‌ಓಸಿ ನೀಡುವುದಾಗಿ ಹೇಳಿ, ನಿಮ್ಮ ಬ್ಯಾಂಕ್ ಖಾತೆಗಳಲ್ಲಿರುವ ಹಣ ವರ್ಗಾವಣೆ ಮಾಡುವಂತೆ ಸೂಚಿಸಿದ್ದಾನೆ. ವಂಚಕನನ್ನು ನಿಜವಾದ ಪೊಲೀಸ್ ಎಂದು ನಂಬಿದ ವೈದ್ಯ, ಆತ ಕಳುಹಿಸಿದ್ದ ಮೂರು ಖಾತೆಗಳಿಗೆ ಒಟ್ಟು 82 ಲಕ್ಷ ರೂ. ವರ್ಗಾವಣೆ ಮಾಡಿ ಮೋಸ ಹೋಗಿದ್ದಾನೆ. ಈ ಸಂಬಂಧ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಿವೃತ್ತರಿಗೆ 5 ಲಕ್ಷ ರೂ. ವಂಚನೆ : ನಗರದ ವಿದ್ಯಾರಣ್ಯಪುರಂನ 71 ವರ್ಷದ ನಿವೃತ್ತರೊಬ್ಬರಿಗೆ ಡಿ.5 ರಂದು ಅಪರಿಚಿತ ಕರೆ ಮಾಡಿ, ಮನಿ ಲ್ಯಾಂಡ್ರಿಂಗ್ ಪ್ರಕರಣದಲ್ಲಿ ಡಿಜಿಟಲ್ ಅರೆಸ್ಟ್ ಮಾಡುತ್ತಿದ್ದೇವೆ. ಅರೆಸ್ಟ್ ಮಾಡದಿರಲು ನೀವು ಫೀಸ್ ಕಟ್ಟಬೇಕಾಗುತ್ತದೆ ಎಂದು ಹೇಳಿ 5 ಲಕ್ಷ ರೂ. ವರ್ಗಾವಣೆ ಮಾಡಿಸಿ ಕೊಂಡು ವಂಚಿಸಿದ್ದಾನೆ. ಈ ಸಂಬಂಧ ಸೆನ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಎಸ್.ಎಲ್.ಭೈರಪ್ಪ ಸ್ಮಾರಕ

ಇರಬಹುದು. ಆದರೆ ಅವರು ಬೆಳೆಸಿದ ಮರಗಳು ನಮ್ಮ ನಡುವೆ ಸಾಕ್ಷಿ ಗುಡ್ಡೆಗಳಾಗಿವೆ. ಸರ್ಕಾರ ಅವರ ಹೆಸರಿನಲ್ಲಿ ಪ್ರಶಸ್ತಿ ಸ್ಥಾಪಿಸುವುದು ಸ್ವಾಗತಾರ್ಹ. ಬೇಲೂರಿನಲ್ಲಿ ವಸ್ತು ಸಂಗ್ರಹಾಲಯ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು. ಸಾಹಿತಿ ಎಸ್.ಎಲ್.ಭೈರಪ್ಪ ಕಡ್ಡಿ ಮುರಿದಂತೆ ಮಾತನಾಡುವ ನಿಷ್ಠುರವಾದಿಯಾಗಿದ್ದರು. ಅವರು ಬರೆದ ಸಾಹಿತ್ಯ ಇಂದು ಸಜ್ಜನಿಕೆ ಮತ್ತು ಸೃಜನಶೀಲತೆಗೆ ಹೆಸರುವಾಸಿಯಾಗಿವೆ. ಸಮಾಜದ ಆತ್ಮವಿಮರ್ಶೆಗೆ ಪ್ರೇರೇಪಣೆಯಾಗಿವೆ ಎಂದು ವಿವರಿಸಿದರು.

ಮಾಗಡಿಯ ಎಚ್.ಸಿ.ಬಾಲಕೃಷ್ಣ , ಕಾಂಗ್ರೆಸ್‌ನ ಜಿ.ಟಿ.ಪಾಟೀಲ್, ಸಿ.ಎಸ್.ಪಾಟೀಲ್, ಪಿ.ಎಂ.ನರೇಂದ್ರ ಸ್ವಾಮಿ, ಎನ್.ಟಿ.ಶ್ರೀನಿವಾಸ್, ಬಿಜೆಪಿಯ ಸಿದ್ದು ಸವದಿ, ಜಾತ್ಯತೀತ ಜನತಾದಳದ ಎಂ.ಟಿ.ಕೃಷ್ಣಪ್ಪ, ಬೇಲೂರಿನ ಸುರೇಶ್ ಮತ್ತಿತರರು ಅಗಲಿದ ಗಣ್ಯರ ಗುಣಗಾನ ಮಾಡಿದರು.

# 1ನೇ ಪುಟದಿಂದ....

## ಪ್ರಶಸ್ತಿ: ಸಿಎಂ

ಮಾಜಿ ಶಾಸಕ ಆರ್.ವಿ.ದೇವರಾಜ್, ಮಾಜಿ ವಿಧಾನ ಪರಿಷತ್ ಸದಸ್ಯರಾದ ಶಿವಪ್ಪ ಶರಣಪ್ಪಗೌಡ ಪಾಟೀಲ್, ಖ್ಯಾತ ಕಾದಂಬರಿಗಾರ ಎಸ್.ಎಲ್. ಭೈರಪ್ಪ, ಸಾಲುಮರದ ತಿಮ್ಮಕ್ಕ ಮತ್ತು ಹಾಸ್ಯ ನಟ ಉಮೇಶ್ ಅವರಿಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದರು.

**ತಿಮ್ಮಕ್ಕ ಹೆಸರಿನಲ್ಲಿ ಪರಿಸರ ಪ್ರಶಸ್ತಿ:** ಸಾಲು ಮರದ ತಿಮ್ಮಕ್ಕ ಅವರ ಜೀವನ ಸಾಧನೆ ಎಲ್ಲರಿಗೂ ಆದರ್ಶ. ಅವರು ಈ ನಾಡಿ ಮತ್ತು ಪರಿಸರ ಸಂರಕ್ಷಣೆಯಲ್ಲಿ ಕೊಟ್ಟ ಕೊಡುಗೆ ಅನನ್ಯ. ಅವರು ತಮ್ಮ ಕಳೆದ ದಿನಗಳಲ್ಲಿ ವ್ಯಕ್ತಪಡಿಸಿದಂತಃ ಮ್ಯೂಜಿಯಂ ಸ್ಥಾಪನೆಯ ಜೊತೆಗೆ ಅವರ ಹೆಸರಿನಲ್ಲಿ ಪರಿಸರ ಪ್ರಶಸ್ತಿ ನೀಡಲು ಸರಕಾರ ನಿರ್ಧರಿಸಿದೆ ಎಂದು ತಿಳಿಸಿದರು.

ಅಲ್ಲದೆ, ಖ್ಯಾತ ಕಾದಂಬರಿಗಾರ ಎಸ್.ಎಲ್. ಭೈರಪ್ಪ ಅವರ ಬಗ್ಗೆ ಮಾತನಾಡುತ್ತಾ, ಸೈದ್ಧಾಂತಿಕವಾಗಿ ನಮಗೂ ಅವರಿಗೂ ಭಿನ್ನಾಭಿಪ್ರಾಯಗಳಿದ್ದಾಗಿಯೂ ಅವರ ಸಾಹಿಯ್ಯ ಕೊಡುಗೆ ಈ ನಾಡಿಗೆ ಗೌರವ ತಂದುಕೊಟ್ಟಿದೆ. ಅವರ ಕೆಲವು ಕಾದಂಬರಿಗಳನ್ನು ನಾನು ಓದಿದ್ದೇನೆ. ಮೈಸೂರಿನಲ್ಲಿ ಅವರ ಸ್ಮಾರಕ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು ಎಂದರು.

ಸಭೆಯಲ್ಲಿ ಸಚಿವರಾದ ಡಾ. ಜಿ.ಪರಮೇಶ್ವರ್, ಪ್ರಿಯಾಂಕ ಖರ್ಗೆ ಸೇರಿದಂತೆ ಎಲ್ಲ ಪಕ್ಷದ ಪ್ರಮುಖ ನಾಯಕರು ಅಗಲಿದ ಗಣ್ಯರಿಗೆ ನುಡಿನಮನ ಸಲ್ಲಿಸಿದರು.

## ಬದಲಾವಣೆ ಸದ್ಯಕ್ಕಿಲ್ಲ

ಅಲ್ಲದೆ, ದೆಹಲಿ ಮಟ್ಟದಲ್ಲಿ ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಸಿಎಂ ಸಿದ್ದರಾಮಯ್ಯರನ್ನು ಹೈಕಮಾಂಡ್ ದೆಹಲಿಗೆ ಕರೆದಿಲ್ಲ. ಶಾಸಕಾಂಗ ಸಭೆ ನಡೆದು ಮುಖ್ಯಮಂತ್ರಿ ಆಯ್ಕೆ ಮಾಡುವಾಗಲೂ ಕಾಲಮಿತಿ ನಿಗಧಿ ಪಡಿಸಿಲ್ಲ. ಅಂದ ಮೇಲೆ ಸಿದ್ದರಾಮಯ್ಯ ಅವರು ಐದು ವರ್ಷ ಮುಖ್ಯಮಂತ್ರಿ ಆಗಿರಬೇಕಲ್ಲವೇ ಎಂದು ತಿಳಿಸಿದರು.

**ಅವಿಶ್ವಾಸ ಮಂಡಿಸುವ ಸಾಮರ್ಥ್ಯ ಬಿಜೆಪಿಗೆ ಇಲ್ಲ:** ನಮ್ಮದು ಬಹುಮತದ ಸರಕಾರ. ಅವರು ಅವಿಶ್ವಾಸ ಮತಕ್ಕೆ ಕೈಹಾಕಿದರೆ ಮುಖಭಂಗ ಎದುರಿಸುತ್ತಾರೆ. ಅವರಿಗೆ ಆ ಸಾಮರ್ಥ್ಯ ಇಲ್ಲ. ಸುಖಾ ಸುಮ್ಮನೆ ರಾಜಕೀಯ ಮಾಡುತ್ತಿದ್ದಾರೆ. ಇದನ್ನೆಲ್ಲ ಬಿಟ್ಟು ಜನರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡೋಣ. ಸಿಕ್ಕಿರುವ ಸಮಯವನ್ನು ಸದುಪಯೋಗ ಪಡಿಸಿಕೊಳ್ಳುತ್ತಾರೋ, ಸಮಯ ವ್ಯರ್ಥ ಮಾಡುತ್ತಾರೋ ನೋಡೋಣ. ಶನಿವಾರ ನವದೆಹಲಿಯಲ್ಲಿ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ರಹಸ್ಯ ಸಭೆ ನಡೆಸಿರುವ ಬಗ್ಗೆ ಮಾಧ್ಯಮಗಳಲ್ಲಿ ಆಗಿರುವ ವರದಿ ಹಿನ್ನಲ್ಲೆಯಲ್ಲಿ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ಈ ಹೇಳಿಕೆ ಮಹತ್ವ ಪಡೆದುಕೊಂಡಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಹಿರಿಯ ನಾಯಕಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ಕರ್ನಾಟಕದ ಉಸ್ತುವಾರಿ ಕೆ.ಸಿ. ವೇಣುಗೋಪಾಲ್ 15 ನಿಮಿಷಗಳ ಕಾಲ ಚರ್ಚೆ ನಡೆಸಿದ್ದಾರೆ.

**ಸಿಎಂ ಪುತ್ರ ಹೇಳಿಕೆ ಅಧಿಕೃತ:** ನಾಯಕತ್ವ ಬದಲಾವಣೆ ಕುರಿತು ಸಿಎಂ ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಹೇಳಿರುವ ಹೇಳಿಕೆ ಅಧಿಕೃತ ಎಂದು ಬಿಜೆಪಿಯ ಉಚ್ಚಾಟಿತ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ತಿಳಿಸಿದರು.

## ನಾಲ್ವರ ಬಂಧನ

ಇಳಿದ ಪೊಲೀರು ಲೋಕೇಶ್‌ನ ಪತ್ನಿಯ ಮೂಲಕವೇ ದುಷ್ಕರ್ಮಿಗಳ ಸಂಪರ್ಕಕ್ಕೆ ಬಂದು ಹಣ ಕೊಡುವುದಾಗಿ ಹೇಳಿ ಆರೋಪಿಗಳನ್ನು ಕೆ.ಆರ್.ನಗರ ಹಂಪಾಪುರ ಬಳಿ ಬಂಧಿಸಿದ್ದಾರೆ.

ಉದ್ಯಮಿ ಲೋಕೇಶ್ ಮೂಲತಃ ಮಂಡ್ಯ ಜಿಲ್ಲೆಯ ಕೆ.ಆರ್. ಎಸ್ ರಸ್ತೆಯ ಪಂಪ್ ಹೊಸಳ್ಳಿ ಗ್ರಾಮದವನಾಗಿದ್ದು ಈತನಿಗೆ ಪ್ರಕರಣದ ಪ್ರಮುಖ ಆರೋಪಿ ಸಂತೋಷ್‌ನ ಪರಿಚಯವಿತ್ತು. ಮತ್ತು ಲೋಕೇಸ್ ಫೈನಾನ್ಸ್ ರಿಯಲ್ ಎಸ್ಟೇಟ್‌ನಲ್ಲಿ ಸಾಕಷ್ಟು ಹಣ ಮಾಡಿದ್ದಾನೆ ಎಂಬ ವಿಚಾರವೂ ಗೊತ್ತಿತ್ತು. ಈ ಹಿನ್ನಲ್ಲೆಯಲ್ಲಿ ಸಂತೋಷ್ ಎಂಬಾತ ತನ್ನದೇ ಊರಿನ ಪ್ರಜ್ವಲ್, ಪ್ರೀತಮ್, ದರ್ಶನ್ ಮತ್ತು ಮೇಟಗಳ್ಳಿ ನಿವಾಸಿ ಅಭಿಷೇಕ್ ಅವರೊಂದಿಗೆ ಸೇರಿ ಅಪಹರಣ ಮಾಡುವ ಸಂಚು ರೂಪಿಸುತ್ತಾನೆ.

ಸುಮಾರು 15 ದಿನಗಳಿಂದ ಉದ್ಯಮಿ ಲೋಕೇಶ್ ಎಂಬುವನನ್ನು ಹಿಂಬಾಲಿಸಿ ಆತನ ದಿನಚರಿ, ಅಭ್ಯಾಸಗಳನ್ನು ಗಮನಿಸಿದ್ದಾರೆ. ಅದರಂತೆ ಡಿ. 6ರಂದು ಹೆರಿಟೇಜ್ ಕ್ಲಬ್‌ಗೆ ತೆರಳಿದ್ದ ಲೋಕೇಶ್ ವಾಪಾಸ್ ಮನೆಗೆ ತೆರಳುವಾಗ ಸಮಯಕಾದು ಈ ಕೃತ್ಯವೆಸಗಿದ್ದಾರೆ. ಬಂಧಿತ ಪ್ರಮುಖ ಆರೋಪಿ ಸಂತೋಷ್ ಕೇವಲ ಮೂರು ತಿಂಗಳ ಹಿಂದಷ್ಟೇ ಲೋಕೇಶ್‌ಗೆ ಪರಿಚಯವಾಗಿದ್ದ. ಈ ಪರಿಚಯರಿಂದ ಆತನ ಎಲ್ಲ ವ್ಯವಹಾರಗಳನ್ನು ತಿಳಿದುಕೊಂಡು ಹಕ್ಕಾಗಿ ಕಿಡ್ನಾಪ್ ಪ್ಲಾನ್ ರಚಿಸಿ, ಸಿಕ್ಕಿಬಿದ್ದಾನೆ.

ಪತ್ತೆ ಕಾರ್ಯಾಚರಣೆಯಲ್ಲಿ ವಿಜಯನಗರ ಎಸಿಪಿ ರವಿ ಪ್ರಸಾದ್, ಪೊಲೀಸ್ ಇನ್ಸ್‌ಪೆಕ್ಟರ್ ಎಸ್.ಡಿ. ಸುರೇಶ್‌ಕುಮಾರ್, ಸಬ್ ಇನ್ಸ್‌ಪೆಕ್ಟರ್‌ಗಳಾದ ಜೈ ಕೀರ್ತಿ ಎಂ, ಆನಂದ್ ಹಾಗೂ ಸಿಬ್ಬಂದಿಗಳಾದ ಶಂಕರ್, ವೆಂಕಟೇಶ್, ಸುನೀಲ್, ಗಂಗಾಧರ್, ಲಿಖಿತ್, ಮಂಜುನಾಥ್, ಲೋಕೇಶ್, ಚಾಲಕ ಗಿರೀಶ್ ಭಾಗವಹಿಸಿದ್ದರು. ಅತೀ ಕಡಿಮೆ ಸಮಯದಲ್ಲಿ ಕಾರ್ಯಚರಣೆ ನಡೆಸಿ ಅಪಹೃತ ವ್ಯಕ್ತಿಯನ್ನು ರಕ್ಷಿಸಿ ಆರೋಪಿಗಳನ್ನು ಬಂಧಿಸಿದ ತಂಡಕ್ಕೆ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಹಾಗೂ ಡಿಸಿಪಿಗಳಾದ ಸುಂದರ ರಾಜ್ ಮತ್ತು ಬಿಂದುಮಣಿ ಅಭಿನಂದಿಸಿದ್ದಾರೆ.

## ಕಡಿತ: ಕೆ.ಜೆ.ಜಾರ್ಜ್

ಗ್ರಾಮೀಣ ಮತ್ತು ಮಲೆನಾಡು ಭಾಗಗಳಲ್ಲಿ ಶುಲ್ಕ ಕಡಿಮೆ ಮಾಡುತ್ತೇವೆ. ಇದರಿಂದ ಹೆಚ್ಚಿನ ಜನರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಬಲ್ಕಿಸ್ ಭಾನು ಅವರು, ಇಡೀ ರಾಜ್ಯದಲ್ಲಿ 2,800 ಕೇಬಲ್ ಆಪರೇಟರ್ ಇದ್ದಾರೆ. ಒಂದು ಕಂಬಕ್ಕೆ ಮೊದಲು 40 ರೂ. ಶುಲ್ಕ ಇತ್ತು. ಹೊಸ ಸುತ್ತೋಲೆ ಹೊರಡಿಸಿ, ಒಂದು ಕಂಬಕ್ಕೆ 150 ರೂ. ಜಿಎಸ್‌ಟಿ ಕಟ್ಟಬೇಕು ಅಂತ ಆದೇಶ ಮಾಡಿದ್ದಾರೆ. ಹಾಗೇ ಕೇಂದ್ರಕ್ಕೆ ಲೈಸನ್ಸ್‌ಗೆ 5 ಸಾವಿರ ರೂ., ಸ್ಥಳೀಯಾಡಳಿತಕ್ಕೂ ಫೀಸ್ ಕಟ್ಟಬೇಕು. ಗ್ರಾಮೀಣ ಹಾಗೂ ಮಲೆನಾಡು ಸೇರಿ ಹಲವು ಭಾಗಗಳಲ್ಲಿ ಸಮಸ್ಯೆ ಹೆಚ್ಚಾಗುತ್ತದೆ. ಹಾಗಾಗಿ ಈ ಶುಲ್ಕವನ್ನು ಕಡಿಮೆ ಮಾಡಬೇಕು ಎಂದು ಒತ್ತಾಯಿಸಿದರು.

## ಸಂಕ್ಷಿಪ್ತ ಸುದ್ದಿ

### ಜನ ಸಂಪರ್ಕ ಸಭೆ

ಮೈಸೂರು:-ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ ನ.ರಾ ಮೊಹಲ್ಲಾ ವಿಭಾಗದ ವ್ಯಾಪ್ತಿಯ ಕೇಂದ್ರ, ಚಾಮುಂಡಿಪುರಂ, ನ.ರಾ ಮೊಹಲ್ಲಾ, ಜ್ಯೋತಿನಗರ ಹಾಗೂ ವರುಣ ಉಪ ವಿಭಾಗ ಕಚೇರಿಗಳಲ್ಲಿ ಡಿಸೆಂಬರ್ 16, 22 ಮತ್ತು 26 ರಂದು 3ನೇ ತ್ರೈಮಾಸಿಕ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಡಿಸೆಂಬರ್ 16 ರಂದು ಬೆಳಗ್ಗೆ 11:00 ಗಂಟೆಗೆ ವರುಣ ಉಪವಿಭಾಗ ಕಚೇರಿಯಲ್ಲಿ, ಡಿಸೆಂಬರ್ 22 ರಂದು ಬೆಳಗ್ಗೆ 11 ಗಂಟೆಗೆ ಕೇಂದ್ರ ಉಪವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 03 ಗಂಟೆಗೆ ನ.ರಾ ಮೊಹಲ್ಲಾ ಉಪವಿಭಾಗ ಕಚೇರಿಯಲ್ಲಿ, ಡಿಸೆಂಬರ್ 26 ರಂದು ಬೆಳಗ್ಗೆ ಚಾಮುಂಡಿಪುರಂ ಉಪ ವಿಭಾಗ ಕಚೇರಿಯಲ್ಲಿ, ಮಧ್ಯಾಹ್ನ 03 ಗಂಟೆಗೆ ಜ್ಯೋತಿನಗರ ಉಪವಿಭಾಗ ಕಚೇರಿಯಲ್ಲಿ ಆಯೋಜಿಸಲಾಗಿದ್ದು, ಗ್ರಾಹಕರು ವಿದ್ಯುತ್ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳೇನಾದರೂ ಇದ್ದಲ್ಲಿ ಜನಸಂಪರ್ಕ ಸಭೆಯಲ್ಲಿ ಲಿಖಿತ ಅರ್ಜಿ ಸಲ್ಲಿಸಿ ತಮ್ಮ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬಹುದು ಎಂದು ಚಾ.ವಿ.ಸ.ನಿ.ನಿ ಯ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

ಮೈಸೂರು:- ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ 66/11 ಕೆ.ವಿ ಜಿ.ಐ.ಎಸ್ ಕಲಾಮಂದಿರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 3ನೇ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಡಿಸೆಂಬರ್ 10 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗಲಿರುವ ಪ್ರದೇಶಗಳು: ಸರಸ್ವತಿಪುರಂ 1 ರಿಂದ 5ನೇ ಮೇನ್, ನ್ಯೂ ಕಾಂತರಾಜ ಅರಸ್ ರಸ್ತೆ, ಕೆ.ಜಿ ಕೊಪ್ಪಲು ಮುಖ್ಯ ರಸ್ತೆ, ಯುನಿವರ್ಸಿಟಿ ಕ್ವಾರ್ಟ್ರಸ್, ಮುಸ್ಲಿಂ ಹಾಸ್ಟೆಲ್, ವಿಶ್ವಮಾನವ ಜೋಡಿ ರಸ್ತೆ, ಮುರಗನ್ ಮೆಡಿಕಲ್ಸ್ ಯಿಂದ ಕುಕ್ಕರಹಳ್ಳಿ ಕೆರೆ ರಸ್ತೆಯವರೆಗೆ, ಸರಸ್ವತಿ ಪುರಂ 5 ರಿಂದ 16 ನೇ ಮೇನ್, ಪಡುವರಾಹಳ್ಳಿ, ಡಿ.ಸಿ ರೆಸಿಡೆನ್ಸಿ, ರಿಜನಲ್ ಕಮಿಷನರ್ ಆಫೀಸ್, ಸಿ.ಎಫ್.ಟಿ.ಆರ್.ಐ ಕ್ಯಾಂಪಸ್, ವಾಲ್ಮೀಕಿ ರಸ್ತೆ, ಜಡ್ಜ್ ಕ್ವಾರ್ಟ್ರಸ್, ಒಂಟಿಕೊಪ್ಪಲು, ಹುಣಸೂರು ಮುಖ್ಯರಸ್ತೆ, ವಾಗ್ದೇವಿ ನಗರ, ಜೆ.ಸಿ ಕಾಲೇಜು ಸುತ್ತಮುತ್ತ, ಚಾಮರಾಜ ಮೊಹಲ್ಲಾ, ಜಿಲ್ಲಾ ಪಂಚಾಯತ್ ಕಚೇರಿ, ಕೋರ್ಟ್, ಅರಸು ರಸ್ತೆ, ಜಿಲ್ಲಾಧಿಕಾರಿ ಕಚೇರಿ, ಮಹಾರಾಜ ಮತ್ತು ಯುವರಾಜ ಕಾಲೇಜು ಸುತ್ತಮುತ್ತ, ಶಿವರಾಂಪೇಟೆ, ದಿವಾನ್ಸ್ ರಸ್ತೆ, ಧನ್ವಂತರಿ ರಸ್ತೆ, ಜೆ.ಕೆ ಗ್ರೌಂಡ್ ಸುತ್ತಮತ್ತಲಿನ ಪ್ರದೇಶ, ಮೆಟ್ರೋಪೋಲ್ ಸುತ್ತಮುತ್ತ, ಜೆ.ಎಲ್.ಬಿ ರಸ್ತೆ, ಜಯಲಕ್ಷ್ಮಿ ವಿಲಾಸ್, ಜಿಲ್ಲಾ ಪಂಚಾಯತ್ ಕಚೇರಿ, ನ್ಯಾಯಾಲಯದ ಆವರಣ, ಏರ್‌ಲೈನ್ಸ್ ಹೋಟೇಲ್ ರಸ್ತೆ, ಮಹಾರಾಜ ಹಾಸ್ಟೆಲ್ ಏರಿಯಾ, ಗೀತಾರಸ್ತೆ, ರಾಮಸ್ವಾಮಿ ವೃತ್ತ ಹಾಗೂ ಸುತ್ತಮುತ್ತಲಿನ ಪ್ರದೇಶಗಳ್ಳಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಚಾವಿಸನಿನಿಯ ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ತಿಳಿಸಿದ್ದಾರೆ.

### ಸಹಾಯಧನಕ್ಕೆ ಅರ್ಜಿ ಆಹ್ವಾನ

ಮೈಸೂರು:-ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ವತಿಯಿಂದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ ಯೋಜನೆಯಡಿ ಗ್ರಾಮೀಣ/ನಗರ ಪ್ರದೇಶದ ಯುವಕ/ಯುವತಿಯರು ಸ್ವ-ಉದ್ಯೋಗ ಪ್ರಾರಂಭಿಸಲು ಉತ್ಪಾದನಾ/ಸೇವಾ ಚಟುವಟಿಕೆ ಘಟಕಗಳನ್ನು ಪ್ರಾರಂಭಿಸಬಹುದಾಗಿದ್ದು, ಉತ್ಪಾದನಾ ಚಟುವಟಿಕೆಗೆ ಗರಿಷ್ಟ 50 ಲಕ್ಷ ರೂ. ಹಾಗೂ ಸೇವಾ ಚಟುವಟಿಕೆಗೆ ಗರಿಷ್ಟ 20 ಲಕ್ಷ ರೂ. ಸಾಲವನ್ನು ಬ್ಯಾಂಕ್ ಮೂಲಕ ಸಾಲವನ್ನು ಹಾಗೂ ಗ್ರಾಮೀಣ ಪ್ರದೇಶದ ಘಟಕಗಳಿಗೆ ಶೇ.35 ಹಾಗೂ ನಗರ ಪ್ರದೇಶದ ಘಟಕಗಳಿಗೆ ಶೇ.25 ರ ಸಹಾಯಧನವನ್ನು ವಿತರಿಸಲಾಗುವುದು.

ಆಸಕ್ತರು ವೆಬ್ ಸೈಟ್ kviconline.gov.in/pmegpeportal ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಸಿಟಿಐ ಕಟ್ಟಡ ಸಯ್ಯಾಜಿರಾವ್ ರಸ್ತೆ ಮೈಸೂರು ಕಚೇರಿಯ ದೂ.ಸಂ:0821-2520886 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

ಮೈಸೂರು:-ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವತಿಯಿಂದ 66/11 ಕೆ.ವಿ ವರಕೂಡು(ವರುಣ) ವಿದ್ಯುತ್ ವಿತರಣಾ ಕೇಧಂರ ಹಾಗೂ 220/66/11 ಕೆ.ವಿ ವಾಜಮಂಗಲ ವಿದ್ಯುತ್ ವತರಣಾ ಕೇಂದ್ರದಲ್ಲಿ ಕ.ವಿ.ಪ್ರ.ನಿ.ನಿ ವತಿಯಿಂದ ತ್ರೈಮಾಸಿಕ ಅವಧಿಯ ನಿರ್ವಾಹಣಾ ಕಾಮಗಾರಿಯನ್ನು ಡಿಸೆಂಬರ್ 09 ರಂದು ಬೆಳಗ್ಗೆ 10 ರಿಂದ ಸಂಜೆ 06 ಗಂಟೆಯವರೆಗೆ ಹಮ್ಮಿಕೊಂಡಿರುವುದರಿಂದ, ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗಲಿರುವ ಪ್ರದೇಶಗಳು: ಹಾರೋಹಳ್ಳಿ, ಮೆಲ್ಲಹಳ್ಳಿ, ಗಳಗರಹುಂಡಿ, ಲಕ್ಷ್ಮಿಪುರ, ಶಿವಪುರ, ಹಲಗಯ್ಯನಹುಂಡಿ, ATM College Muffadal ಇಂಡಸ್ಟ್ರೀಸ್, HNK ಇಂಡಸ್ಟ್ರೀಸ್, ಬನ್ನೂರು ಮುಖ್ಯ ರಸ್ತೆ, ಟಿ.ನರಸೀಪುರ ಮುಖ್ಯ ರಸ್ತೆ, ನಾಡನಹಳ್ಳಿ, ಭುಗತಹಳ್ಳಿ, ವಾಜಮಂಗಲ, ವರುಣ, ದಂಡಿಕೆರೆ, ಪಿಲ್ಲಹಳ್ಳಿ, ಮೊಸಂಬಾಯನಹಳ್ಳಿ, ಚಿಕ್ಕಹಳ್ಳಿ, ಚೋರನಹಳ್ಳಿ, ಯಾಂದಳ್ಳಿ, ವರಕೂಡು, ಬಡಗಲಹುಂಡಿ, ಮೂಡಲಹುಂಡಿ, ಕೆಂಪೇಗೌಡನ ಹುಂಡಿ, ವಸಂತನಗರ, ಪ್ರಕೃತಿ ಬಡಾವಣೆ, ಲಾಲಾ ಬಹದ್ದೂರ್ ಶಾಸ್ತ್ರಿ ನಗರ, ಗೋಪಲ್ ಗೌಡ ನಗರ, ಎಖಖ ಬಡಾವಣೆ 2ನೇ ಹಂತ, ಪೊಲೀಸ್ ಬಡಾವಣೆ 3ನೇ ಹಂತ, BVL §qÁªÀuÉ, MYCEM College, VTC Regional center,, ವರಕೂಡು Paper Factory ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ಚಾವಿಸನಿನಿಯ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲಾನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

# ಬುದ್ಧ ಜಗತ್ತು ಕಂಡ ಶ್ರೇಷ್ಠ ಮನೋವಿಜ್ಞಾನಿ

## ಅಂಬೇಡ್ಕರ್ ಮಹಾಪರಿನಿಬ್ಬಾಣ ಕಾರ್ಯಕ್ರಮದಲ್ಲಿ ಸಾಹಿತಿ ಹರಕುಮಾರ್ ಅಭಿಪ್ರಾಯ

ಮೈಸೂರು: ಗೌತಮ ಬುದ್ಧರು ದಾರ್ಶನಿಕರಷ್ಟೇ ಅಲ್ಲದೆ ಈ ಜಗತ್ತು ಕಂಡ ಶ್ರೇಷ್ಠ ಮನೋವಿಜ್ಞಾನಿ. ತಮ್ಮ ಜೀವಮಾನವಿಡಿ ಮನುಷ್ಯನ ಮನಸ್ಸಿಗೆ ಸಂಬಂಧಿಸಿದ ವಿಚಾರಗಳನ್ನು ವಿಶ್ಲೇಷಿಸುವುದರ ಜೊತೆಗೆ, ವ್ಯಕ್ತಿಯ ಪ್ರತಿಯೊಂದು ನಂಬಿಕೆ, ನಡವಳಿಕೆಗೂ ಮನುಷ್ಯನ ಮನಸ್ಸೇ ಮೂಲ ಕಾರಣವಾದ್ದರಿಂದ ಧ್ಯಾನದ ಮೂಲಕ ಹೇಗೆ ನಿಯಂತ್ರಿಸಬಹುದೆಂದು ವೈಜ್ಞಾನಿಕವಾಗಿ ಸಾಬೀತುಗೊಳಿಸಿದ್ದಾರೆ ಎಂದು ಲೇಖಕ ಸಿ.ಹರಕುಮಾರ್ ಹೇಳಿದರು.

ವಿಜಯನಗರ 1ನೇ ಹಂತದ ಡಿ.ಸಂಜೀವಯ್ಯ ಸ್ಮಾರಕ ಶಿಕ್ಷಣ ಸಂಸ್ಥೆಯ ಆವರಣದಲ್ಲಿರುವ ಬುದ್ಧ ವಿಹಾರದಲ್ಲಿ ಕರ್ನಾಟಕ ಬುದ್ಧ ಧಮ್ಮ ಸಮಿತಿ ವತಿಯಿಂದ ಶನಿವಾರ ಸಂಜೆ ಆಯೋಜಿಸಿದ್ದ ಬೋಧಿಸತ್ವ ಬಾಬಾಸಾಹೇಬ್ ಅಂಬೇಡ್ಕರ್‌ರವರ 69ನೇ ಮಹಾಪರಿನಿಬ್ಬಾಣ ದಿನಾಚರಣೆ ಪ್ರಯುಕ್ತ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮತ್ತು ಒಬ್ಬ ವ್ಯಕ್ತಿ ಮತ್ತೊಬ್ಬನಿಗಿಂತ ಹೇಗೆ ಭಿನ್ನ/ ಒಂದೇ ಎಂಬ



ವಿಷಯ ಕುರಿತ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿಯಬ್ಬ ವ್ಯಕ್ತಿಯ ಸಾಮಾಜಿಕವಾಗಿ, ಭಾವನಾತ್ಮಕವಾಗಿ, ಭೌತಿಕವಾಗಿ, ವಾನಸಿಕ ಮತ್ತು ಆಧ್ಯಾತ್ಮಿಕ ಎಂಬ ಪಂಚ ಅಂಶಗಳ ಮೂಲಕ ತನ್ನ ಸಂವಹನ ಕಲೆ, ಬೌದ್ಧಿಕತೆ, ಕೌಶಲ, ದಕ್ಷತೆ, ಮೌಲ್ಯಗಳನ್ನು ರೂಢಿಸಿಕೊಳ್ಳುತ್ತಾ ಹೋಗುತ್ತಾನೆ. ಪ್ರತಿಯಬ್ಬ ವ್ಯಕ್ತಿಯೂ ಜೈವಿಕವಾಗಿ ಒಂದೇ ರೀತಿ ಇದ್ದರೂ ವಾನಸಿಕವಾಗಿ ಭಿನ್ನ ವ್ಯಕ್ತಿತ್ವಗಳನ್ನು ಹೊಂದಿರುತ್ತಾರೆ ಎಂದು ಹೇಳಿದರು.

ಸಂವಾದಕ್ಕೂ ಮುನ್ನ ಬುದ್ಧ ಪ್ರಕಾಶ್ ಭಂತೇಜಿಯವರು ಬುದ್ಧ, ಬಾಬಾ ಸಾಹೇಬರ ಭಾವಚಿತ್ರಗಳಿಗೆ ದೀಪಗಳನ್ನು ಬೆಳಗುವುದರ ಮೂಲಕ ಬುದ್ಧ ವಂದನೆ ಸಲ್ಲಿಸಿದರು.

ಪ್ರೊ.ಕುಮಾರಸ್ವಾಮಿ, ಪ್ರೊ.ಪಿ.ಮಾದೇಶ್, ಪ್ರೊ. ಕೆ.ಬಿ. ಕೃಷ್ಣಮೂರ್ತಿ, ಸಂಬಯ್ಯ, ಹೊರಳವಾಡಿ ನಂಜುಂಡಸ್ವಾಮಿ ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು. ಸಮಿತಿಯ ಅಧ್ಯಕ್ಷರಾದ ಪ್ರೊ.ಡಿ. ನಂಜುಂಡಯ್ಯನವರು ಅಧ್ಯಕ್ಷೀಯ ಭಾಷಣ ಮಾಡಿದರು. ಸಹ ಕಾರ್ಯದರ್ಶಿ ಎಚ್.ಶಿವರಾಜ್, ಎಂ.ಸಾವಕಯ್ಯ , ಪಿ.ಮಹದೇವ್, ನಿವೃತ್ತ ಇಂಜಿನಿಯರ್ ಆರ್.ನಟರಾಜ್, ನಿಸರ್ಗ ಸಿದ್ದರಾಜು, ಪುಟ್ಟಸ್ವಾಮಿ, ಮಹೇಶ್, ಭರತ್‌ರಾಜ್, ಬಸವಣ್ಣ, ಡಾ.ಟಿ.ಮಂಜು ಸತ್ತಿಗೆಹುಂಡಿ, ಮಾ.ನಾಗಯ್ಯ, ಪ್ರೇಮಲತಾ, ಬಿ.ಗಾಯ ತ್ರಿದೇವಿ, ಎಸ್.ತೇಜಶ್ರೀ, ಅಕ್ಷಯ್, ರಾಜಮ್ಮ, ಮಹದೇವಸ್ವಾಮಿ, ವಸಂತಕುಮಾರ್ ಬೆಳ್ಳುಬ್ಬಿ, ರೂಪೇಶ್, ವಿವಿಧ ಸಂಘ -ಸಂಸ್ಥೆಗಳ ಪದಾಧಿಕಾರಿಗಳು ಹಾಜರಿದ್ದರು.

## ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಎಲ್ಲಾ ಶೋಷಿತ ಸಮುದಾಯಗಳ ಧ್ವನಿಯಾಗಿದ್ದರು: ಡಾ.ಜಿ.ಬಿ ದೊರೆಸ್ವಾಮಿ

ಮೈಸೂರು: – ನಗರದ ಮಹಾರಾಣಿ ಮಹಿಳಾ ಕಲಾ ಕಾಲೇಜು ಮೈಸೂರು ಇಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 70ನೇ ಪರಿನಿಬ್ಬಾಣ ದಿನವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿದ್ದ ಸ್ನಾತಕೋತ್ತರ ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ದೊರೆಸ್ವಾಮಿ ಜಿ ಬಿ ರವರು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುಣ್ಯಸ್ಮರಣೆಯ ಅಂಗವಾಗಿ ಅವರ ವಿಚಾರಧಾರೆಗಳನ್ನು ತಿಳಿಸುತ್ತಾ, ಡಾ. ಬಿ ಆರ್ ಅಂಬೇಡ್ಕರ್ ಅವರು ಭಾರತದ ಶೋಷಿತ ಸಮುದಾಯ, ಹಿಂದುಳಿದ ವರ್ಗ ಮತ್ತು ಮಹಿಳೆಯರನ್ನು ಒಳಗೊಂಡಂತೆ ಎಲ್ಲಾ ಸಮುದಾಯಗಳಿಗೂ ಸಾಮಾಜಿಕ, ಆರ್ಥಿಕ ಮತ್ತು ಸಾಮಾಜಿಕ ನ್ಯಾಯವನ್ನು ಕಲ್ಪಿಸಿ ಕೊಡುವುದರ ಮೂಲಕ ಪ್ರತಿಯೊಬ್ಬರು ಘನತೆ ಮತ್ತು ವ್ಯಕ್ತಿ ಗೌರವದಿಂದ ಬದುಕುವ ಅವಕಾಶವನ್ನು ಸಂವಿಧಾನ ರಚನೆಯ ಮೂಲಕ ಕಲ್ಪಿಸಿಕೊಟ್ಟರು ಎಂದು ಅಭಿಪ್ರಾಯ ಪಟ್ಟರು, ಶತಶತಮಾನಗಳಿಂದ ತುಳಿತಕ್ಕೆ ಒಳಗಾದ ಸಮುದಾಯಗಳು ಘನತೆಯಿಂದ ಬದುಕುವಂತೆ ಅವರಿಗೆ ನಾಗರಿಕ ಹಕ್ಕುಗಳನ್ನು, ಮುಖ್ಯವಾಗಿ ಮತದಾನದ ಹಕ್ಕು ನೀಡುವುದರ ಮೂಲಕ ಸಾಮಾಜಿಕ ಬದಲಾವಣೆಗೆ ಕಾರಣೀಭೂತರಾದರು. ಕೃಷಿ ಕೈಗಾರಿಕೆ, ನೀರಾವರಿ, ಬ್ಯಾಂಕಿಂಗ್, ಶಿಕ್ಷಣ, ರಾಜಕೀಯ ಕ್ಷೇತ್ರವನ್ನು ಒಳಗೊಂಡಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮದೇ ಆದ ವಿಶಿಷ್ಟ ಚಿಂತನೆಗಳಿಂದ ಹೊಸ ದಿಕ್ಕನ್ನು ನೀಡಿದರು.

ಇಂತಹ ಮಹನೀಯರ ಪರಿನಿಬ್ಬಾಣ ದಿನದಂದು ಅವರನ್ನು ಸ್ಮರಿಸುವುದು ಪ್ರತಿಯೊಬ್ಬ ಭಾರತೀಯನ ಆದ್ಯ ಕರ್ತವ್ಯವಾಗಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ರವರನ್ನು ಜಾತಿ ಕನ್ನಡಕದಿಂದ ನೋಡುವ ಬದಲು ಅವರನ್ನು ಒಬ್ಬ ಮಹಾನ್ ಮಾನವತಾವಾದಿಯಾಗಿ ನೋಡುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿನಿಯರು ಅವರ ವಿಚಾರಧಾರೆಗಳ ಬಗ್ಗೆ ತಿಳಿದುಕೊಳ್ಳುವುದು ಅತ್ಯಂತ ಮಹತ್ವದ್ದಾಗಿದೆ ಎಂಬುದನ್ನು ತಿಳಿಸಿಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ ಎಸ್ ಅನಿತಾ ರವರು ವಹಿಸಿದ್ದರು. ವೇದಿಕೆಯಲ್ಲಿ ಅರ್ಥಶಾಸ್ತ್ರ ವಿಭಾಗದ ಸಂಯೋಜಕರಾದ ಡಾ. ಆನಂದ್, ಡಾ. ಕೃಷ್ಣರಾಜೇಂದ್ರ ಭರತ್ ಉಪಸ್ಥಿತರಿದ್ದರು. ಸ್ನಾತಕೋತ್ತರ ವಿಭಾಗದ ಎಲ್ಲಾ ಸಂಯೋಜಕರು, ಅಧ್ಯಾಪಕರು, ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿನಿ ಕಾರ್ಯಕ್ರಮವನ್ನು ನಿರೂಪಿಸಿದರು.

## ಶಾಸಕ ಗಣೇಶ್ ಪ್ರಸಾದ್‌ಗೆ ಸಚಿವ ಸ್ಥಾನ ನೀಡಬೇಕು: ಡಾ.ಅಸ್ಕರ್ ಅಲಿ ಮನವಿ

ಮೈಸೂರು: ಸಚಿವ ಸಂಪುಟ ವಿಸ್ತರಣೆ ಅಥವಾ ಪುನರ್ ರಚನೆಯ ಉದ್ದೇಶ ಸರ್ಕಾರಕ್ಕೆ ಇದ್ದರೆ ಗುಂಡ್ಲುಪೇಟೆಯ ಕಾಂಗ್ರೆಸ್ ಶಾಸಕರಾದ ಗಣೇಶ್ ಪ್ರಸಾದ್ ರವರಿಗೆ ಮಂತ್ರಿ ಸ್ಥಾನ ನೀಡಬೇಕಾಗಿ ಕಾಂಗ್ರೆಸ್ ನ ಯುವ ಮುಖಂಡರಾದ ಡಾ ಅಸ್ಕರ್ ಅಲಿ ಪಕ್ಷದ ವರಿಷ್ಟರಲ್ಲಿ ಒತ್ತಾಯಿಸಿದ್ದಾರೆ.



ಹಳೇ ಮೈಸೂರಿನ ಭಾಗಗಳನ್ನು ಒಳಗೊಂಡಂತೆ ದಕ್ಷಿಣ ಕರ್ನಾಟಕದ ಒಟ್ಟು 74 ವಿಧಾನಸಭಾ ಕ್ಷೇತ್ರಗಳಲ್ಲಿ ಸುಮಾರು 20 ಲಕ್ಷ ಲಿಂಗಾಯತ ಸಮಾಜದವರಿದ್ದು, ಗಣೇಶ್ ಪ್ರಸಾದ್ ರವರು ಈ ಸಮಾಜದ ಏಕೈಕ ಶಾಸಕರಗಿದ್ದಾರೆ. ಈ ಭಾಗದಲ್ಲಿ ಪಕ್ಷ ಸಂಘಟನೆಗೆ ಕಾಂಗ್ರೆಸ್, ಉತ್ತರ ಕರ್ನಾಟಕದ ಲಿಂಗಾಯತ ಮುಖಂಡರ ಮೇಲೆ ಅವಲಂಬನೆಯಗಿದ್ದು ಇದು ಪಕ್ಷದ ಬಲವರ್ಧನೆಗೆ ತೊಡಕಾಗಲಿದೆ ಎಂದು ಅವರು ತಿಳಿಸಿದ್ದಾವಿ.

ಈ ಸುಳಿವು ಅರಿತಿರುವ ಉತ್ತರ ಹಾಗು ಮದ್ಯ ಕರ್ನಾಟಕದ ಬಿಜೆಪಿಯ ಲಿಂಗಾಯತ ಮುಖಂಡರು ದಕ್ಷಿಣದ ಕರ್ನಾಟಕದ ಕಡೆಗೆ ವಲಸೆ ಬರುತಿದ್ದಾರೆ. ಈ ಮದ್ಯೆ ಶಾಸಕ ಗಣೇಶ್ ಪ್ರಸಾದ್ ರವರನ್ನು ಸಚಿವರನ್ನಾಗಿ ಮಾಡುವ ಮೂಲಕ ಸ್ಥಳೀಯ ನಾಯಕತ್ವವನ್ನು ಸಂವರ್ಧನೆಗೊಳಿಸಿ, ಕಾಂಗ್ರೆಸ್ ಪಕ್ಷದ ಸಂಘಟನೆಗೆ ಉತ್ತರ ಕರ್ನಾಟಕದ ಲಿಂಗಾಯತ ಮುಖಂಡರ ಮೇಲಿನ ಅವಲಂಬನೆಯನ್ನು ತಪ್ಪಿಸುವುದರ ಜೊತೆಗೆ ಬಿಜೆಪಿಯವರ ವಲಸೆಯನ್ನು ತಡೆದು ಅವರ ಕಾರ್ಯತಂತ್ರವನ್ನು ವಿಫಲಗೊಳಿಸಬಹುದಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಎಲ್ಲಾ ಸಮುದಾಯಗಳ ಸಮಾನ ಅಭಿವೃದ್ಧಿಗಾಗಿ ಶ್ರಮಿಸುತಿರುವ ಶಾಸಕ ಗಣೇಶ್ ಪ್ರಸಾದ್ ರವರು ಸಚಿವರಾಗಲು ಸಮರ್ಥರಾಗಿದ್ದು, ಈ ಮೂಲಕ ಚಾಮರಾಜನಗರ ಜಿಲ್ಲೆಗೂ ಪ್ರಾಧಿನಿಧ್ಯ ನೀಡಿದಂತಾಗುತ್ತದೆ ಎಂದು ಡಾ .ಅಸ್ಕರ್ ಅಲಿ ತಿಳಿಸಿದ್ದಾರೆ.

## ಪ್ರತಿಭಾ ಕಾರಂಜಿಯಲ್ಲಿ 16 ಮಕ್ಕಳಿಗೆ ಬಹುಮಾನ

ತಿ.ನರಸೀಪುರ : ತಾಲ್ಲೂಕಿನ ಹಳೆ ಕುಕ್ಕೂರಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಮೆದೀನಿಯಲ್ಲಿ ನಡೆದ ಹೊಸ ಕುಕ್ಕೂರು ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಿ 16 ಬಹುಮಾನ ಪಡೆದಿದ್ದಾರೆ.

ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ರವರು ಮಾತನಾಡಿ ಹಳೇ ಕುಕ್ಕೂರಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮಕ್ಕಳಲ್ಲಿ ವಿಶೇಷ ಪ್ರತಿಭೆ ಇದೆ. ಮತ್ತು ಇಂತಹ ಮಕ್ಕಳಲ್ಲಿ ಪ್ರತಿಭಾ ಕಾರಂಜಿ, ಒಂದು ಮಹತ್ವದ ಕಾರ್ಯಕ್ರಮವಾಗಿದ್ದು, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಸುಪ್ತ ಪ್ರತಿಭೆಗಳ ಅನಾವರಣ, ಮತ್ತು 'ಕೌಶಲ್ಯಗಳ ಅಭಿವೃದ್ಧಿಗೆ' ವೇದಿಕೆ ಒದಗಿಸುತ್ತದೆ.

ಇದು ಕಲೆ, ಸಾಹಿತ್ಯ ಮತ್ತು ಇತರ ಪಠ್ಯೇತರ ಚಟುವಟಿಕೆಗಳ ಮೂಲಕ ಶಿಕ್ಷಣ ಮತ್ತು ಮನರಂಜನೆಯನ್ನು ಸಂಯೋಜಿಸುತ್ತದೆ, ಗ್ರಾಮೀಣ ಮತ್ತು ನಗರದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಿ, ರಾಷ್ಟ್ರಮಟ್ಟದ ಪ್ರತಿಭಾನ್ವಿತರನ್ನು ರೂಪಿಸಲು ನೆರವಾಗುತ್ತದೆ ಎಂದು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಮೂರ್ತಿ ವ್ಯಕ್ತ ಪಡಿಸಿದರು.

ಪ್ರತಿಭಾ ಕಾರಂಜಿಯಲ್ಲಿ ವಿಜೇತರಾದ ಮಕ್ಕಳು: ರಚನಾ ಪ್ರಸಾದ್, ಹನ್ವಿಕ, ಜೀವಿತಾ, ಮಾನ್ವಿತಾ, ಉಮ್ಮೆಕುಲುಸುಮ್, ಸುಮೈಜಾ, ರುಚಿತಾ ಪ್ರಸಾದ್, ಯಶ್ವಂತ್, ಗೌತಮಿ, ಅನ್ವಿತಾ, ಪೃಥ್ವಿ, ಗೌತಮಿ, ಗೌತಮ್, ಅಫಾನ್, ಯುಕ್ತಿ, ಅಫನಾನ್, ವಿದ್ಯಾರ್ಥಿಗಳು ಏಳು ಪ್ರಥಮ ಸ್ಥಾನ ಪಡೆದು ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಅದರಲ್ಲಿಯು ಕೆಲ ಮಕ್ಕಳು ಎರಡು ಸ್ಥಾನವನ್ನು ಪಡೆದು ಕೊಂಡಿರುತ್ತಾರೆ.

ವಿಜೇತರಾದ ಮಕ್ಕಳನ್ನು ಶಾಲೆಯ ಮುಖ್ಯ ಶಿಕ್ಷಕರಾದ ಸಿ. ಚಂದ್ರಕಲಾ, ಮತ್ತು ಶಿಲ್ಪಾ. ಆರ್, ಹಾಗೂ ಗ್ರಾಮದ ಮುಖಂಡರು, ಪೋಷಕರು ಮಕ್ಕಳನ್ನು ಅಭಿನಂದಿಸಿದ್ದಾರೆ. ಮತ್ತು ಹಳೆ ಕುಕ್ಕೂರಿನ ಸ.ಕಿ.ಪ್ರಾ. ಶಾಲೆ ಹೆಮ್ಮೆ ತಂದು ಕೊಟ್ಟಿದ್ದಾರೆ ಎಂದು ಶಿಕ್ಷಕರು, ಗ್ರಾಮಸ್ಥರು ಸಂತಸ ವ್ಯಕ್ತ ಪಡಿಸಿದರು.



## ಕುಕ್ಕರಹಳ್ಳಿಯಲ್ಲಿ ಪರಿನಿಬ್ಬಾಣ ದಿನ ಆಚರಣೆ



ಮೈಸೂರು : ಕುಕ್ಕರಳ್ಳಿಯ ಜೈ ಭೀಮ್ ಕ್ಷೇಮಾಭಿವೃದ್ಧಿ ಸಂಘ ಮತ್ತು 'ಭೀಮ ಬಲ ಬಳಗ'ದ ತಂಡವು ಕುಕ್ಕರಳ್ಳಿಯ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, 69 ಮೊಂಬತ್ತಿ ಬೆಳಗಿದರು. ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್ ರವರ ಜೀವನ ಸ್ಮರಣೆ ಮಾಡುವ ಮೂಲಕ ಪರಿನಿಬ್ಬಾಣ ದಿನದ ಕಾರ್ಯಕ್ರಮವನ್ನು ಮಾಡಲಾಯಿತು. ನಂತರ ಕುಕ್ಕರಳ್ಳಿಯ ಪ್ರಮುಖ ಬೀದಿಗಳಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರೂ ಮಕ್ಕಳೊಂದಿಗೆ ಮೂಂಬತಿಯ ಬೆಳಕಿನಲ್ಲಿ ಮೌನ ನಡಿಗೆಯನ್ನು ಮಾಡಿದರು.

ಈ ಕಾರ್ಯಕ್ರಮದಲ್ಲಿ ಜೈ ಭೀಮ್ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷರಾದ ಪ್ರಿನ್ಸಿಪಾಲ್ ಪುರುಷೋತ್ತಮ್, ಅನ್ನದಾನಿ ನಿವೃತ್ತ ಬಿಇಓ, ಭೀಮ ಬಲ ಬಳಗದ ಸಂಚಾಲಕರಾದ ಪರಮಾನಂದ.ಎಂ.ಎಸ್, ನಗರಪಾಲಿಕೆ ಸದಸ್ಯೆ ಶ್ರೀಮತಿ ವೇದಾವತಿ, ಗಿರೀಶ್, ಸರ್ವೇಶ್, ನವೀನ್ ಮೌರ್ಯ, ಪ್ರತಾಪ ಡಾ.ಕಿರಣ್, ಆನಂದ ರಾಜು ಶ್ರೀಮತಿ ಶುಭ,ಜೈಪಾಲ, ಮಾಹದೇವಪ್ಪ, ನಾಗರಾಜ್, ಸುನಿಲ, ಯೋಗಾನಂದ ಇನ್ನಿತರರು ಭಾಗವಹಿಸಿದ್ದರು.

# ಅಂಬೇಡ್ಕರ್ ಅವರನ್ನು ಜಾತಿಯಿಂದ ಕಳಚಿಟ್ಟು ನೋಡಿ

ತಿ.ನರಸೀಪುರ: ಜೀವನದ ಆರಂಭದಿಂದ ಅಂತ್ಯದವರೆಗೂ ಭಾರತೀಯತೆಯನ್ನು ಪ್ರತಿಪಾದಿಸುತ್ತಿದ್ದ ಅಂಬೇಡ್ಕರ್ ಅವರನ್ನು ಭಾರತೀಯರು ಜಾತಿಯ ಸಂಕೋಲೆ ಕಳಚಿಟ್ಟು ನೋಡುವಂತಾಗಬೇಕು ಎಂದು ಕೆ.ಎನ್.ಪ್ರಭುಸ್ವಾಮಿ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕು ಆಡಳಿತ ಸಮಾಜ ಕಲ್ಯಾಣ ಇಲಾಖೆ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಪರಿ ನಿಬ್ಬಾಣ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ದೇಶದಲ್ಲಿ ಇದುವರೆಗೂ ಡಾ.ಬಿ.ಆರ್ ಅಂಬೇಡ್ಕರ್ ಅವರನ್ನು ಅವರಲ್ಲಿದ್ದ ಅಪಾರಜ್ಞಾನ ಅಥವಾ ದೂರದೃಷ್ಟಿ ಚಿಂತನೆಗಳಿಂದ ನೋಡಲಿಲ್ಲ, ಸಮುದಾಯಕ್ಕೆ ಸೀಮಿತಿಗೊಳಿಸಲಾಯಿತು. ಆರಾಧಿಸುವ ಜನರ ನಡವಳಿಕೆಗಳು ಕೂಡ ಅನ್ಯ ಸಮುದಾಯಗಳು ಅವರನ್ನು ದ್ವೇಷಿಸುವಂತೆ ಮಾಡಿಬಿಟ್ಟವು ಎಂದು ವಿಷಾದಿಸಿದರು.

ಭಾರತದಲ್ಲಿ ಹಲವು ಜಾತಿ, ಧರ್ಮದ ಜನರು ವಾಸವಿದ್ದು, 140ಕೋಟಿ ಜನಸಂಖ್ಯೆ ಇರುವ ದೇಶಕ್ಕೆ ಸಂವಿಧಾನ ಎಂಬ ದಿಕ್ಸೂಚಿ ಭದ್ರ ಬುನಾದಿ ನೀಡಿದೆ. ಅಲ್ಲದೆ ದೇಶವನ್ನು ಉತ್ತಮ



ಮಾರ್ಗದೆಡೆಗೆ ಸಾಗಿಸುತ್ತಿದೆ. ಅಂಬೇಡ್ಕರ್ ಅವರ ಬಗ್ಗೆ ಮಾತನಾಡಬೇಕೆಂದರೆ ಅವರ ಬಗ್ಗೆ ಆಳವಾದ ಅಧ್ಯಯನ ಅನಿವಾರ್ಯ. ಅಲ್ಪಮತಿಗಳಿಗೆ ಅಂಬೇಡ್ಕರ್ ಸಿದ್ದಿಸುವುದಿಲ್ಲ ಎಂದು ತಿಳಿಸಿದರು.

ತಹಸೀಲ್ದಾರ್ ಟಿ.ಜಿ.ಸುರೇಶಾಚಾರ್ ಮಾತನಾಡಿ, ದೇಶಕ್ಕೆ ಸಂವಿಧಾನ ಕೊಡುಗೆ ನೀಡಿ ಸರ್ವ ಜನಾಂಗದ ಸಮಾನತೆಗೆ ಮಹತ್ತರವಾದ ಕೊಡುಗೆ ನೀಡಿದ ಬಾಬಾ ಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ಅವರು ಕೇವಲ ಒಂದು ವರ್ಗಕ್ಕೆ ಸೀಮಿತವಲ್ಲ, ಅವರು ಈ ದೇಶದ ಬಹುಜನರ ಪ್ರಶ್ನಾತೀತ ನಾಯಕರು.

ಅಂಬೇಡ್ಕರ್ ಅವರನ್ನು ಒಂದು ಜಾತಿ ಸೀಮಿತಗೊಳಿಸಿ ಅವರ ಮಹಾನ್ ವ್ಯಕ್ತಿತ್ವವನ್ನು ಸಂಕುಚಿತಗೊಳಿಸುವುದು ತರವಲ್ಲ. ಇದು ಅವರ ವ್ಯಕ್ತಿತ್ವಕ್ಕೆ ಸಲ್ಲಿಸುವ ಅಗೌರವ. ಅವರು ಒಂದೇ ಜಾತಿ, ಧರ್ಮಕ್ಕೆ ಸೀಮಿತರಲ್ಲ, ಅವರು ಈ ದೇಶದ ಬಹುಜನರ ನಾಯಕ ಎಂದರು.

ತಾಲೂಕು ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ ಮತ್ತು ತಾಲೂಕು ಬಾಬು ಜಗಜೀವನ್ ರಾಂ ಸಂಘದ ಮಾಜಿ ಅಧ್ಯಕ್ಷ ಮೂಗೂರು ಸಿದ್ದರಾಜು ಅವರು ಅಂಬೇಡ್ಕರ್ ಕುರಿತು ಮಾತನಾಡಿದರು. ಸೋಸಲೆ ಪಿಎ ಸಿ ಸಿ ಎಸ್ ನಿರ್ದೇಶಕ ಎಸ್. ನಂಜುಂಡಯ್ಯ ಅಂಬೇಡ್ಕರ್ ಕುರಿತಾದ ಕ್ರಾಂತಿ ಗೀತೆಯನ್ನು ಪ್ರಸ್ತುತಪಡಿಸಿದರು.

ಜಿ.ಪಂ ಮಾಜಿ ಸದಸ್ಯ ಹೊನ್ನನಾಯಕ, ತಾ ಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಮಾಜಿ ಸದಸ್ಯರಾದ ಗಣೇಶ್, ರಾಮಲಿಂಗಯ್ಯ, ಮಾಜಿ ಉಪಾಧ್ಯಕ್ಷ ಪ್ರಸನ್ನ, ಎಸ್ಸಿ/ಎಸ್ಟಿ ಹಿತರಕ್ಷಣಾ ಸಮಿತಿ ಸದಸ್ಯರಾದ ಎನ್.ಎಂ. ಜಗದೀಶ್, ತಲಕಾಡು ಪಾರ್ವತಮ್ಮ, ಬನ್ನೂರು ಪುರಸಭೆ ಮುಖ್ಯಾಧಿಕಾರಿ ಆರ್. ಹೇಮಂತ್ ರಾಜ್, ತಾ ಪಂ ಯೋಜನಾಧಿಕಾರಿ ಕೆ.ರಂಗಸ್ವಾಮಿ, ತೋಟಗಾರಿಕೆ ಸಹಾಯಕ ನಿರ್ದೇಶಕಿ ಶಾಂತ,ಕೃಷಿ ಸಹಾಯಕ ನಿರ್ದೇಶಕಿ ರೂಪ,ತಾಲೂಕು ವೈದ್ಯಾಧಿಕಾರಿ ಡಾ.ರವಿಕುಮಾರ್ , ಸಿಡಿಪಿಒ ಗೋವಿಂದರಾಜು, ಪುಟ್ಟಸ್ವಾಮಿ, ಅಬಕಾರಿ ನಿರೀಕ್ಷಕಿ ಸುಧಾರಾಣಿ, ಪಿಡಬ್ಲ್ಯೂಡಿ ಎಇಇ ಸತೀಶ್ ಚಂದ್ರನ್,ಸೆಸ್ಕ್ ಎಇಇ ವೀರೇಶ್, ಸರ್ವೇ ಸಹಾಯಕ ನಿರ್ದೇಶಕ ಪಂಚಲಿಂಗಪ್ಪ, ಪಶು ಸಂಗೋಪನಾ ಸಹಾಯಕ ನಿರ್ದೇಶಕ ಡಾ.ಮಲ್ಲಿಕಾರ್ಜುನಸ್ವಾಮಿ, ಸಮಾಜ ಕಲ್ಯಾಣಾಧಿಕಾರಿ ಕೆ.ಡಿ.ವಿನೂತನ್, ಪುರಸಭೆ ಆರ್ ಐ ಕೆ.ಸಿ.ತ್ರಿವೇಣಿ,ದಸಂಸ ಜಿಲ್ಲಾ ಸಂಚಾಲಕ ಸೋಸಲೆ ರಾಜಶೇಖರ್, ಆಲಗೂಡು ಶಿವಣ್ಣ, ಮುಖಂಡರಾದ ಸೋಸಲೆ ಮಂಜುನಾಥ್, ಆಲಗೂಡು ಸಿದ್ದಪ್ಪ, ಟೈಲರ್ ಮಹದೇವ, ವಿಜಯಪುರ ಶಿವಶಂಕರ್, ವಾಟಾಳು ಪುಟ್ಟಸ್ವಾಮಿ, ಸಿ.ಪುಟ್ಟಮಲ್ಲಯ್ಯ, ಎಚ್.ನಾಗರಾಜು, ತಾಲೂಕು ನಾಗಲಗೆರೆ, ಶಿವಕುಮಾರ್, ನಿಲಯ ಪಾಲಕರಾದ ಮಹೇಶ್, ರಾಕೇಶ್ ಹಾಗೂ ಇತರರು ಇದ್ದರು.

## ಸಂಕ್ಷಿಪ್ತ ಸುದ್ದಿ

### ಕಲಾ ಪ್ರತಿಭೋತ್ಸವ 2025-26

ಮೈಸೂರು:- ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕಲಾ ಪ್ರತಿಭೋತ್ಸವ 2025-26 (ಬಾಲ ಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆಗಳಿಗೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಡಿಸೆಂಬರ್ 10 ಮತ್ತು 11 ರಂದು ಬೆಳಗ್ಗೆ 9.30 ರಿಂದ ಸಂಜೆ 05 ಗಂಟೆಯ ವರೆಗೆ ಕರ್ನಾಟಕ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದು, ಡಿಸೆಂಬರ್ 10 ರಂದು ಬೆಳಗ್ಗೆ 9.30 ಗಂಟೆಗೆ ಕರ್ನಾಟಕ ಕಲಾಮಂದಿರ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಎಚ್.ಡಿ ಕುಮಾರಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ. ಹೆಚ್.ಸಿ ಮಹದೇವಪ್ಪ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್.ಸಿ., ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ. ರಮೇಶ್ ಬಂಡಿ ಸಿದ್ದೇಗೌಡ, ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರಾದ ಸುನೀಲ್ ಬೋಸ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಅವರು ಆಗಮಿಸಲಿದ್ದಾರೆ.

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವೀರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ. ದೇವೇಗೌಡ, ಕೆ.ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಶಂಕರ್ ಡಿ., ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್. ಶ್ರೀವತ್ಸ, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ. ಹರೀಶ್ ಗೌಡ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಹೆಚ್. ವಿಶ್ವನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ. ಯತಿಂದ್ರ ಎಸ್, ಕೆ. ವಿವೇಕಾನಂದ ಮತ್ತು ಕೆ. ಶಿವಕುಮಾರ್ ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ, ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್ ಅಧ್ಯಕ್ಷರಾದ ಎಚ್.ಡಿ ಗಣೇಶ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷರಾದ ರಂಗಸ್ವಾಮಿ, ಬೆಂಗಳೂರಿನ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ರಾಮಪ್ಪ. ಎಂ, ಕರ್ನಾಟಕ ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ಪ್ಯಾರಿಜಾನ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

### ಖಾಸಗಿ ಹಾಗೂ ಸರ್ಕಾರಿ ಸಂಸ್ಥೆಗಳ ಗಮನಕ್ಕೆ

ಮಂಡ್ಯ:- ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಮಂಡ್ಯ ನಗರಸಭೆಯ ವ್ಯಾಪ್ತಿ ಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮದ್ದೂರು ನಗರಸಭೆ ಪೌರಯುಕ್ತರಿಗೆ ತಿಳಿಸಬೇಕಾ ಗಿರುತ್ತದೆ.

ಸಂಸ್ಥೆಗಳು ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು, ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂದಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು ಕಡ್ಡಾಯವಾಗಿದೆ.

ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ಮದ್ದೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲೋಕಾಯುಕ್ತರಿಂದ ದೂರು ಸ್ವೀಕರಿಸುವ ಕಾರ್ಯಕ್ರಮ

ಮೈಸೂರು:- ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಡಿಸೆಂಬರ್ 10 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕಿನ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ/ ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅದೀಕ್ಷಕರಾದ ಉದೇಶ ಟಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೋಷಿಯಲ್ ಮೀಡಿಯಾ: ಕಸದೊಳಗೆ ರಸ ಹುಡುಕಬೇಕಿದೆ

## ಪ್ರೊಟೆಕ್ಟ್ ದಿ ಪಬ್ಲಿಕ್ ಪತ್ರಿಕೆ ಬಿಡುಗಡೆಗೊಳಿಸಿ ಮೈ.ಜಿ.ಪ.ಸಂ ಅಧ್ಯಕ್ಷ ಕೆ.ದೀಪಕ್ ಕಳವಳ



ಮೈಸೂರು: ಅಸಲಿ ಮತ್ತು ನಕಲಿ ನಡುವೆ ವ್ಯತ್ಯಾಸ ಕಂಡುಕೊಳ್ಳಲಾಗದಷ್ಟು ಪತ್ರಿಕೋದ್ಯಮ ವ್ಯವಸ್ಥೆ ಹದಗೆಟ್ಟಿದ್ದು ನೈಜ ಪತ್ರಕರ್ತರು ತಮ್ಮ ಅಸ್ಮಿತೆಯನ್ನು ಉಳಿಸಿಕೊಳ್ಳಲು ಹೋರಾಡಬೇಕಾದ ಸ್ಥಿತಿ ನಿರ್ಮಾಣಗೊಂಡಿದೆ ಎಂದು ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ಕಳವಳ ವ್ಯಕ್ತಪಡಿಸಿದರು.

ನಗರದ ಐಡಿಯಲ್ ಜಾವಾ ರೋಟರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿ.ವಿ. ಶ್ರೀನಾಥ್ ಶೆಟ್ಟಿ ಸಂಪಾದಕತ್ವದಲ್ಲಿ ಆರಂಭಗೊಂಡಿರುವ 'ಪ್ರೊಟೆಕ್ಟ್ ದಿ ಪಬ್ಲಿಕ್? ಬಹುಭಾಷೆಯ ಮಾಸ ಪತ್ರಿಕೆಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮೊಬೈಲ್ ಹೊಂದಿರುವವರೆಲ್ಲ ಪತ್ರಕರ್ತರಂತೆ ವರ್ತಿಸುತ್ತಿದ್ದು, ನೈಜ ಪತ್ರಿಕೋದ್ಯಮಕ್ಕೆ ಧಕ್ಕೆ ಉಂಟಾಗಿದೆ ಎಂದು ಅಭಿಪ್ರಾಯಪಟ್ಟರು.

ಇಂದು ಪತ್ರಕರ್ತರಾಗಿರುವವರು ಗಾಂಧೀ, ಅಂಬೇಡ್ಕರ್, ತಿಲಕರು ಪತ್ರಕರ್ತರಾಗಿದ್ದರು ಎಂಬ ಬಗ್ಗೆ ಪ್ರಜ್ಞೆ ಇರಬೇಕು. ಅಂತಹ ಮಹಾನ್ ನಾಯಕರು ಸ್ಪರ್ಶಿಸಿದ ಪತ್ರಿಕೋದ್ಯಮದ ಮುಂದುವರೆದ ಭಾಗವಾಗಿ ನಾವು ಮತ್ತು ನಮ್ಮ ಆಲೋಚನೆಗಳು ಹೇಗಿರಬೇಕು. ನಮ್ಮ ಪತ್ರಿಕೋದ್ಯಮದ ಧ್ಯೇಯ ಏನಾಗಿರಬೇಕು ಎಂಬ ಬಗ್ಗೆ ತಿಳಿದುಕೊಳ್ಳಬೇಕೆಂದರು.

ಭಾರತದ ಪತ್ರಿಕೋದ್ಯಮದ ವಿಶ್ವಾಸಾರ್ಹತೆ ಕುಸಿಯುತ್ತಿದೆ. ಸಾಮಾಜಿ ಮಾಧ್ಯಮ ಬಂದ ಮೇಲೆ ಮಾಧ್ಯಮ ಗತಾರದಂತ್ತಾಗಿದ್ದು, ಕಸಗಳ ನಡುವೆ ಒಳ್ಳೆಯದನ್ನು ಹುಡುಕುವುದೇ ದೊಡ್ಡ ಸವಾಲಾಗಿದೆ. ಇಂತಹ ಕಾಲಮಾನದಲ್ಲಿ 'ಪ್ರೊಟೆಕ್ಟ್ ದಿ ಪಬ್ಲಿಕ್? ಹೆಸರಿನಲ್ಲಿ ಬಹುಭಾಷಾ ಮಾಸ ಪತ್ರಿಕೆಯನ್ನು ಹೊರ ತರುತ್ತಿರುವುದು ಸಾಹಸದ ಕೆಲಸ ಎಂದರು.

ಮಾಧ್ಯಮ ದುರ್ಬಲಗೊಂಡರೆ ಪ್ರಜಾಪ್ರಭುತ್ವವೂ ದುರ್ಬಲಗೊಳ್ಳುತ್ತದೆ. ಮಾಧ್ಯಮ ಉಳಿದರೆ ಮಾತ್ರ ಸ್ವಾತಂತ್ರ್ಯ ಉಳಿಯುತ್ತದೆ. ಮುಂದೆ ಪ್ರಜಾಪ್ರಭುತ್ವಕ್ಕೆ ಗಂಡಾಂತರ ಬಂದರೆ ಮತ್ತೊಮ್ಮೆ ನೈಜ ಪತ್ರಿಕೋದ್ಯಮ ಮತ್ತು ನೈಜ ಪತ್ರಕರ್ತರ ಜಾಗೃತರಾಗುವುದಲ್ಲಿ ಯಾವುದೇ ಅನುಮಾನಗಳಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರಂಭದಲ್ಲಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಸಿ.ವಿ. ಶ್ರೀನಾಥ್, ಪತ್ರಿಕೋದ್ಯಮದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಕನ್ನಡ, ಇಂಗ್ಲಿಷ್, ತಮಿಳ್, ಮಳಯಾಳಂ, ತೆಲಗು, ಹಿಂದಿ ಭಾಷೆಗಳಲ್ಲಿ ಮಾಸ ಪತ್ರಿಕೆಯನ್ನು ಹೊರ ತರಲಾಗುತ್ತಿದ್ದು, ಈಗಾಗಲೇ 30 ಸಾವಿರ ಓದುಗರನ್ನು ಹೊಂದಿದ್ದೇವೆ. ಮಾನವ ಹಕ್ಕು, ಭ್ರಷ್ಟಾಚಾರ, ಕಾನೂನು ಜಾಗೃತಿಗಾಗಿ ಪತ್ರಿಕೆಯನ್ನು ಆರಂಭಿಸಿರುವುದಾಗಿ ತಿಳಿಸಿದರು.

ವೇದಿಕೆಯಲ್ಲಿ ಹಿರಿಯ ಶಿಕ್ಷಣ ತಜ್ಞ ಸಿ.ಜೆ. ವೆಂಕಟರಮಣ ಶೆಟ್ಟಿ, ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಡಾ. ಶೈಲೇಶ್ ರಾಜೇ ಅರಸ್, ಹಿರಿಯ ವಕೀಲ ಪಿ. ಪಾಲಾಕ್ಷ, ಪತ್ರಕರ್ತ ರಾಜು ಕಾರ್ಯ ಮೊದಲಾದವರು ಹಾಜರಿದ್ದರು.

# ಹಗಿನವಾಳು ಗ್ರಾಮದಲ್ಲಿ ಸಿದ್ದಪ್ಪಾಜಿ ದೇಗುಲ ಉದ್ಘಾಟನೆ



ನಂಜನಗೂಡು:- ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ಹಗಿನವಾಳು ಗ್ರಾಮದಲ್ಲಿ ನೂತನ ಶ್ರೀ ಸಿದ್ದಪಾಜಿ ದೇವಸ್ಥಾನದ ಉದ್ಘಾಟನೆ ಮತ್ತು ಕಳಶ ಪ್ರತಿಷ್ಠಾಪನೆ ಕಾರ್ಯ ಸೋಮವಾರ ಸಂಭ್ರಮ ಸಡಗರ ಹಾಗೂ ಶ್ರದ್ಧಾ ಭಕ್ತಿಯಿಂದ ಜರುಗಿತು. ಶ್ರೀ ಧರೆಗೆ ದೊಡ್ಡವರ ಸಂಸ್ಥಾನ ಮಠದ ಶ್ರೀ ಕಿರಣ್ ಬುದ್ದಿ ಧಿವ್ಯ ಸಾನಿಧ್ಯ ವಹಿಸಿ, ಪೂಜಾ ಕೈಂಕರ್ಯಗಳನ್ನ ನೆರವೇರಿಸಿದ್ರು. ಇದಕ್ಕೂ ಮುನ್ನ ಬೆಳಿಗ್ಗೆ 6 ಗಂಟೆಗೆ ಹಾಲರವೆ ಉತ್ಸವ ಹಾಗೂ ಕಂಡಾಯ ಕಳಶ ಮೆರವಣಿಗೆಯನ್ನ ಮಾಡಲಾಯ್ತು. ತಮಟೆ ವಾದ್ಯಗೋಷ್ಠಿ ಮೂಲಕ ತಲೆ ಮೇಲೆ ಕಳಶ ಹೊತ್ತ ಬಾಲೆಯರು, ಮಹಿಳೆಯರು ಮತ್ತು ಪುರುಷರು ಗ್ರಾಮದ ಬಸವೇಶ್ವರ ದೇವಸ್ಥಾನದಿಂದ ಶ್ರೀ ಸಿದ್ದಪಾಜಿ ದೇವಸ್ಥಾನದವರೆಗೂ ಮೆರವಣಿಗೆ ಸಾಗಿದರು. ಮೆರವಣಿಗೆಯಲ್ಲಿ ಸತ್ತಿಗೆ ಸೂರಪಾನಿಗಳು ಕೂಡ ನೋಡುಗರ ಗಮನ ಸೆಳೆದವು. ಹೀಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆ ನೂತನ ಶ್ರೀ ಸಿದ್ದಪಾಜಿ ದೇವಸ್ಥಾನ ತಲುಪಿ ಅಲ್ಲಿ ಮಹಿಳೆಯರ ತಲೆ ಮೇಲಿನ ಕಳಶಗಳನ್ನ ಇಳಿಸಿ ದೇವಸ್ಥಾನದ ಸುತ್ತ ಸಾಲಾಗಿ ಜೋಡಿಸುವ ಮೂಲಕ ಸಮಾರೋಪಗೊಂಡಿತು. ಇದಾದ ಬಳಿಕ ವಿನಯ್ ಗುರೂಜಿ ನೇತೃತ್ವದ ಅರ್ಚಕರ ತಂಡದಿಂದ ಧಾರ್ಮಿಕ ಪೂಜಾ ಕೈಂಕರ್ಯಗಳನ್ನ ನೆರವೇರಿಸಲಾಯ್ತು. ಶುಭ ಮಕರ ಲಗ್ನದಲ್ಲಿ ಪುಣ್ಯಹ, ಪಂಚಗವ್ಯ, ದೇವನಾಂದಿ, ಕಂಕಣಧಾರಣೆ ನಂತರ ಶ್ರೀ ಕಂಡಾಯ ಪ್ರತಿಷ್ಠಾಪನೆ, ಪ್ರತಿಷ್ಟ, ಕಾಲ ಆವಾಹನೆ, ಮೂಲಮಂತ್ರ ಹೋಮದೊಂದಿಗೆ ಪೂರ್ಣಾಹುತಿ ದೇವತಾ ಕಾರ್ಯಗಳೊಡನೆ ರಾಜೋಪಚಾರ, ಮಂತ್ರಪುಷ್ಪ ಇತ್ಯಾದಿ ದೇವತಾ ಕಾರ್ಯ ಮತ್ತು ಇತರೇ ಪೂಜಾ ಕೈಂಕರ್ಯಗಳನ್ನ ಶ್ರದ್ಧಾ ಭಕ್ತಿಯಿಂದ ನೆರವೇರಿಸಿ, ದೇವಸ್ಥಾನದ ಗೋಪುರಗಳ ಮೇಲೆ ಕಳಶವನ್ನು ಪ್ರತಿಷ್ಠಾಪಿಸಲಾಯ್ತು.

ಇನ್ನು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಧರೆಗೆ ದೊಡ್ಡವರ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಬಿ.ಎಸ್. ಜ್ಞಾನಾನಂದ ಚನ್ನರಾಜೇ ಅರಸ್ ಸ್ವಾಮೀಜಿ ವಹಿಸಬೇಕಿತ್ತು. ಅವರ ಅನುಪಸ್ಥಿತಿಯಲ್ಲಿ ದಿವ್ಯ ಸಾನಿಧ್ಯ ವಹಿಸಿದ್ದ ಅವರ ಮಗ, ಶ್ರೀ ಕಿರಣ್ ಬುದ್ದಿ ಅವರಿಗೆ ಊರಿನ ಗ್ರಾಮಸ್ಥರು ಭರ್ಜರಿ ಸ್ವಾಗತ ಕೋರಿದ್ರು. ದೇವಸ್ಥಾನ ಒಳ ಪ್ರವೇಶಿಸಿದ ಅವರು ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಿ, ದೇವಸ್ಥಾನದ ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸಲಾಗಿದ್ದ ಕಂಡಾಯಕ್ಕೆ ವಿಶೇಷ ಪೂಜೆ ಸಲ್ಲಿಸಿ, ಶಕ್ತಿಯನ್ನು ತುಂಬುದ್ರು. ಹೀಗೆ ಪೂಜೆ ಸಲ್ಲಿಸಿ ಗರ್ಭಗುಡಿಯಿಂದ ಹೊರ ಬಂದ ಬಳಿಕ ಅವರಿಗೆ ಊರಿನ ಗ್ರಾಮಸ್ಥರುಗಳು ಪಾದ ಪೂಜೆ ನೆರವೇರಿಸಿ, ಭಕ್ತಿ ಪೂರ್ವ ನಮನವನ್ನು ಸಲ್ಲಿಸಿದ್ರು. ಈ ಸಂದರ್ಭ ಭಕ್ತರು ಕೂಡ ಕಾಲಿಗೆ ಬಿದ್ದು ತಮ್ಮ ಶ್ರದ್ಧಾ ಭಕ್ತಿಯನ್ನ ಮೆರೆದರು

ಈ ವೇಳೆ ಉಪ್ಪಾರ ಜನಾಂಗದ ಮುಖಂಡ ಮೂಗಶೆಟ್ಟಿ ಹಾಗೂ ಊರಿನ ಯಜಮಾನರು ಮತ್ತು ಗ್ರಾಮಸ್ಥರುಗಳು ಕಿರಣ್ ಬುದ್ದಿಯವರಿಗೆ ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ ಗೌರವಿಸಿ ಸನ್ಮಾನಿಸಿದ್ರು.

ಈ ವೇಳೆ ಮಾತನಾಡಿದ ಶ್ರೀ ಕಿರಣ್ ಬುದ್ದಿ ಅವರು, ಹಗಿನವಾಳು ಗ್ರಾಮದ ಜನರ ಈ ಶ್ರದ್ಧಾ ಭಕ್ತಿ ನೋಡಿ ಖುಷಿಯಾಗಿದೆ. ಧರೆಗೆ ದೊಡ್ಡವರು ಎನ್ನಲಾಗುವ ಮಂಟೇಸ್ವಾಮಿ, ಸಿದ್ದಾಪಜಿ ಮತ್ತು ರಾಚಪ್ಪಾಜಿ ಅವರ ಮೇಲೆ ಈ ಭಾಗದ ಜನ ನಂಬಿಕೆ ಇಟ್ಟಿದ್ದು, ಇದರ ಫಲವಾಗಿ ಇವತ್ತು ದೇವಸ್ಥಾನ ಉದ್ಘಾಟನೆ ಆಗಿದೆ. ಮುಂದೆ ಇದೇ ಭಕ್ತಿ ಮತ್ತು ಪರಂಪರೆ ಯನ್ನು ಉಳಿಸಿ ಬೆಳೆಸಿಕೊಂಡು ಹೋಗುವ ಕಾರ್ಯವನ್ನು ಗ್ರಾಮಸ್ಥರು ಮಾಡಬೇಕು ಎಂದರು. ಸಮಸ್ತ ಗ್ರಾಮಸ್ಥರಿಗೆ ಮುಂದಿನ ದಿನಗಳಲ್ಲಿ ಒಳಿತಾಗಿ, ಗ್ರಾಮದಲ್ಲಿ ಸುಖ, ಶಾಂತಿ ಮತ್ತು ನೆಮ್ಮದಿಯ ವಾತಾವರಣ ನಿರ್ಮಾಣವಾಗಲೀ ಅಂತ ಶುಭ ಹಾರೈಸುದ್ರು.

ಪೂಜಾ ಕೈಂಕರ್ಯ ನೆವೇರಿಸಿದ ವಿನಯ್ ಗುರೂಜಿ ಮಾತನಾಡಿ ಹಗಿನವಾಳು ಗ್ರಾಮ ತುಂಬಾನೇ ವಿಶೇಷ. ಈ ಗ್ರಾಮದಲ್ಲಿ ಶ್ರೀ ಸಿದ್ದಪಾಜಿ ದೇವಸ್ಥಾನದ ಉದ್ಘಾಟನೆ ಮತ್ತು ಕಳಶ ಪ್ರತಿಷ್ಠಾಪನೆ ಆಗಿದೆ. ಶಾಸ್ತ್ರೋಕ್ತ ಮತ್ತು ಸಂಪ್ರದಾಯ ಬದ್ಧವಾಗಿ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಗಿದೆ ಅಂತ ಕಳಶ ಪ್ರತಿಷ್ಠಾಪನೆ ಮತ್ತು ದೇವಸ್ಥಾನದ ಉದ್ಘಾಟನೆ ಪೂಜಾ ಕೈಂಕರ್ಯಗಳ ಬಗ್ಗೆ ವಿವರಿಸಿದ್ರು...

ಇನ್ನು ಆಗಮಿಸಿದ್ದ ಸಾವಿರಾರು ಸಂಖ್ಯೆ ಭಕ್ತರಿಗೆ ದಾನಿಗಳು, ಗ್ರಾಮದ ಗೌಡಿಕೆ, ಊರಿನ ಯಜಮಾನರು, ಗ್ರಾಮಸ್ಥರ ನೆರವಿನೊಂದಿಗೆ ಅನ್ನದಾಸೋಹ ಕೂಡ ನಡೆಸಲಾಯ್ತು. ಅನ್ನ, ಸಾಂಬಾರ್, ಸಿಹಿ ಬೂಂದಿ, ಪಾಯಸ, ಹುಳಿ, ಸೇರಿ ಇತರೇ ಖಾದ್ಯಗಳನ್ನ ಉಣಬಡಿಸಲಾಯ್ತು.

ಒಟ್ಟಾರೇ, ಗ್ರಾಮದಲ್ಲಿ ಕಳೆದ 40 ವರ್ಷಗಳ ಹಿಂದೆ ಗ್ರಾಮಸ್ಥರು ಕಂಡಿದ್ದ ಕನಸು ಈಗ ನನಸಾಗಿದೆ. ಹಗಿನವಾಳು ಸೇರಿ ಸುತ್ತ ಮುತ್ತಲ ಗ್ರಾಮಸ್ಥರುಗಳು ಮತ್ತು ದಾನಿಗಳ ಸಹಾಯದಿಂದ ಸುಮಾರು 60ಲಕ್ಷ ರೂ. ಅಂದಾಜು ವೆಚ್ಚದಲ್ಲಿ ಶ್ರೀ ಸಿದ್ದಪಾಜಿ ಅವರ ನೂತನ ದೇವಸ್ಥಾನ ನಿರ್ಮಾಣ ಮಾಡಿ, ಸಿದ್ದಾಪಜಿ ಕಂಡಾಯ ಸ್ಥಾಪನೆ ಮತ್ತು ಶ್ರೀ ಬಸವನ ವಿಗ್ರಹ ಪ್ರತಿಷ್ಠಾಪನೆ ಮಾಡಲಾಗಿದ್ದು,ಧರೆಗೆ ದೊಡ್ಡವರು ಅಂತಾನೇ ಕರೆಯಲ್ಪಡುವ, ಶತಮಾನಗಳ ಹಿಂದೆ ಧರ್ಮಕ್ರಾಂತಿ ಮೂಲಕ ತನ್ನದೇ ಆದ ಪರಂಪರೆ ಉಳಿಸಿಕೊಂಡಿರುವ, ಕನ್ನಡ ಧಾರ್ಮಿಕ ಜನಪದ ಕಾವ್ಯವೊಂದರ ಕಥಾ ನಾಯಕ, ನೀಲಗಾರರ ಆರಾಧ್ಯ ದೈವ ಶ್ರೀ ಸಿದ್ದಾಪಜೀ ಅವರ ದೇವಸ್ತಾನದಿಂದ ಹಗಿನವಾಳು ಸೇರಿದಂತೆ ಸುತ್ತ ಮುತ್ತ ಗ್ರಾಮಗಳಿಗೆ ಒಳಿತಾಗಲೀ ಅನ್ನೋ ನಂಬಿಕೆ ಗ್ರಾಮಸ್ಥರು ಮತ್ತು ಭಕ್ತರದ್ದಾಗಿದ್ದು, ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿ, ದೇವಸ್ಥಾನದ ಪೂಜಾ ಕೈಂಕರ್ಯಗಳನ್ನ ಕಣ್ತುಂಬಿಕೊಂಡದ್ದು, ಈ ಭಾಗದಲ್ಲಿ ಶ್ರೀ ಸಿದ್ದಪಾಜಿ ಮೇಲಿರುವ ನಂಬಿಕೆ ಮತ್ತು ಭಕ್ತಿ ಏನು ಅನ್ನೋದುನ್ನ ಅನವಾರಣಗೊಳ್ಳುವಂತೆ ಮಾಡಿತು.

# ನಕಲಿ ಜನನ, ಮರಣ ಪತ್ರ ನೀಡುವವರ ವಿರುದ್ಧ ಕ್ರಮ: ಡಾ.ಕುಮಾರ

ಮಂಡ್ಯ:- ಜಿಲ್ಲೆಯಲ್ಲಿ ನಕಲಿ ಜನನ ಮತ್ತು ಮರಣ ಪತ್ರ ನೀಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನೆಡೆದ ಜಿಲ್ಲಾ ಮಟ್ಟದ ಜನನ ಮತ್ತು ಮರಣ ಸಮನ್ವ ಸಮಿತಿ ಸಭೆ ಹಾಗೂ ಜಿಲ್ಲಾ ಮಟ್ಟದ ಬೆಳೆ ಕಟಾವು ಪ್ರಯೋಗ ಹಾಗೂ ಕೃಷಿ ಅಂಕಿ ಅಂಶ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜನನ ಮತ್ತು ಮರಣ ವನ್ನು ನೊಂದಣಿ ಮಾಡಲು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿ ಗಳಿಗೆ ಅಧಿಕಾರಿಯನ್ನು ನೀಡಲಾಗಿದೆ.ಜನನ ಹಾಗೂ ಮರಣ ಸಂಭವಿಸಿದ 30 ದಿನಗಳೊಳಗಾಗಿ ಜನನ ಮತ್ತು ಮರಣ ಪತ್ರ ಮಾಡಿಸಿಕೊಳತಕ್ಕದ್ದು ಇಲ್ಲವಾದಲ್ಲಿ 30 ದಿನಗಳು ಮೀರಿದರೆ ತಹಶೀಲ್ದಾರ್ ಬಳಿ ತೆರಳಬೇಕು 1 ವರ್ಷ ಮೀರಿದರೆ ಕೋರ್ಟ್ ನ ಮೂಲಕ ಜನನ ಮತ್ತು ಮರಣ ಪ್ರಮಾಣ ಪತ್ರ ಪಡೆಯಬೇಕಾ ಗಿರುತ್ತದೆ ಎಂದು ಹೇಳಿದರು.

ಗ್ರಾಮೀಣ ಪ್ರದೇಶದ ಜನರಿಗೆ ಜನನ ಮತ್ತು ಮರಣ ಪ್ರಮಾಣ ಪತ್ರದ ಕುರಿತು ಅರಿವು ಇರುವುದಿಲ್ಲ. ನಗರ ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯಿತಿಗಳು ಇದರ ಕುರಿತಾಗಿ ಸಾರ್ವಜನಿಕರಿಗೆ ಅರಿವು ಮೂಡಿಸ ಬೇಕು ಎಂದು ಸೂಚಿಸಿದರು.


ಜನನ ಪತ್ರ ನೀಡಲು ಆಸ್ಪತ್ರೆಗಳಲ್ಲಿ ವಿಳಂಬವಾಗುತ್ತಿದೆ. ಸದರಿ ವರ್ಷ ಜಿಲ್ಲೆಯಲ್ಲಿ 1 ವರ್ಷ ಮೇಲ್ಪಟ್ಟ 30 ಮಕ್ಕಳಿಗೆ ಜನನ ಪ್ರಮಾಣ ಪತ್ರ ನೊಂದಣಿ ಆಗಿಲ್ಲ. ಯಾವುದೇ ಕಾರಣಕ್ಕೂ ಜನನ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬವಾಗಬಾರದು, ಜನನ ಪ್ರಮಾಣ ಪತ್ರ ನೀಡುವ ಸಂದರ್ಭದಲ್ಲಿ ಮಗುವಿನ ತಂದೆ ತಾಯಿ ಹೆಸರು ಹಾಗೂ ವಿಳಾಸ ವನ್ನು ಖಾತ್ರಿ ಪಡಿಸಿಕೊಂಡು ನೊಂದಣಿ ಮಾಡಬೇಕು ಎಂದು ಸೂಚಿಸಿದರು.

ಜನನ ಮತ್ತು ಮರಣ ಸಂಭವಿಸಿದ 30 ದಿನಗಳೊಳಗಾಗಿ ಪ್ರಮಾಣ ಪತ್ರ ಪಡೆಯುವಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಆಶಾ ಕಾರ್ಯಕರ್ತೆಯ ಮೂಲಕ ಜನರಿಗೆ ಜಾಗೃತಿ ಮೂಡಿಸಿ ಎಂದರು.

ಜಿಲ್ಲೆಯ ರೈತರು ಸಾಂಪ್ರದಾಯಕ ಕೃಷಿ ಪದ್ಧತಿಯನ್ನು ಅಳವಡಿಸಿ ಕೊಂಡಿದ್ದಾರೆ. ಸಾಂಪ್ರದಾಯಕ ಬೆಳೆ ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಕುಸಿಯುತ್ತಿದೆ. ರೈತರು ಮಿಶ್ರ ಬೆಳೆ ಮತ್ತು ಪರ್ಯಾಯ ಬೆಳೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು.ಮಿಶ್ರಬೆಳೆ ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಹೆಚ್ಚುತ್ತದೆ. ರೈತರಿಗೆ ತೋಟಗಾರಿಕಾ ಬೆಳೆಗಳನ್ನು ಬೆಳೆಯಲು ಅರಿವು ಮೂಡಿಸಿ ಎಂದು ಹೇಳಿದರು.

ಜಿಲ್ಲೆಯಲ್ಲಿ ಈಗಾಗಲೇ ಬೆಳೆ ಸಮೀಕ್ಷೆ ನಡೆಸಲಾಗಿದೆ.ಕೆಲವು ಪ್ರದೇಶಗಳಲ್ಲಿ ಬೆಳೆ ಸಮೀಕ್ಷೆಯ ಮಾಹಿತಿಯನ್ನು ತಪ್ಪಾಗಿ ನಮೂದಿಸಲಾಗಿದೆ. ಅಧಿಕಾರಿಗಳು ಸಭೆ ನಡೆಸಿ ತಪ್ಪಾಗಿರುವ ಮಾಹಿತಿಯನ್ನು ತ್ವರಿತಗತಿಯಿಂದ ತೆಗೆದುಹಾಕಿ.ಹಾಗೂ ಬೆಳೆ ಸಮೀಕ್ಷೆಯಲ್ಲಿ ತಪ್ಪು ಮಾಹಿತಿ ಸಲ್ಲಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಹೇಳಿದರು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಶ್ರೀನಿವಾಸ್,ಅಪರ ಪೊಲೀಸ್ ಅಧೀಕ್ಷಕ ತಿಮ್ಮಯ್ಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಕೆ. ಮೋಹನ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್,ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕಿ ರೂಪಶ್ರೀ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.



# ಸಾರ್ವಜನಿಕರು ಕಾನೂನು ಪಾಲನೆ ಮಾಡಬೇಕು: ಎನ್.ಚಲುವರಾಯಸ್ವಾಮಿ



ನಾಗಮಂಗಲ:- ಸಾರ್ವಜನಿಕ ಕಾನೂನಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಹೇಳಿದರು.

ತಾಲೂಕಿನ ದೇವಲಾಪುರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ನೂತನ ಗ್ರಾಮ ಪಂಚಾಯಿತಿ ಕಟ್ಟಡ, ಪೊಲೀಸ್ ಹೊರ ಠಾಣೆ ಹಾಗೂ ನೂತನ ಅಂಗನವಾಡಿ ಕಟ್ಟಡ ಉದ್ಘಾಟನಾ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

ಜಗತ್ತಿನಲ್ಲಿ ಅತ್ಯಂತ ಹೆಚ್ಚುವ ಬಾರಿ ಕಾನೂನು ನಿಯಮಗಳನ್ನು ಭಾರತ ಉಲ್ಲಂಘಿಸುತ್ತ ಬರುತ್ತಿದೆ ಅದರಲ್ಲೂ ಕರ್ನಾಟಕದಲ್ಲಿ ಹೆಚ್ಚು ಬಾರಿ ಕಾನೂನು ನಿಯಮಗಳು ಉಲ್ಲಂಘನೆ ಮಾಡಲಾಗಿದೆ. ಕಾನೂನು ನಿಯಮಗಳಿರುವುದು ಸಾರ್ವಜನಿಕರ ಹಿತ ಕಾಯಲು ಸಾರ್ವಜನಿಕರು ಪ್ರಾಮಾಣಿಕವಾಗಿ ಕಾನೂನು ನಿಯಮಗಳನ್ನು ಪಾಲಿಸಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ರಸ್ತೆಗಳಲ್ಲಿ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಸಾರ್ವಜನಿಕರು ಹೆಲ್ಮೆಟ್ ಧರಿಸದೆ ವಾಹನ ಚಾಲಾಯಿಸುತ್ತಿರಿ. ಪೊಲೀಸ್ ಇಲಾಖೆ ಹೆಲ್ಮೆಟ್ ಧರಿಸಲು ಸೂಚಿಸಿದರೆ ಅದನ್ನು ಅಪರಾಧಂತೆ ಕಾಣುತ್ತೀರಿ. ಕಳೆದ ವರ್ಷ ಯುವತಿಯೊಬ್ಬಳು ಹೆಲ್ಮೆಟ್ ಧರಿಸದೆ ಪ್ರಾಣ ಕಳೆದುಕೊಂಡಳು ಅವಳ ಮನೆಯವರು ಹೆಲ್ಮೆಟ್ ಧರಿಸಿದ್ದರೆ ಸಾವು ಸಂಭವಿಸುತ್ತಿರಲಿಲ್ಲ ಎಂದು ಸಂತಪಾ ವ್ಯಕ್ತಪಡಿಸಿದರು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ,ಮಾಜಿ ಶಾಸಕ ಮನ್ ಮುಲ್ ನಿರ್ದೇಶಕ ಅಪ್ಪಾಜಿಗೌಡ, ಎಸ್ಪಿ ಗಂಗಾಧರಸ್ವಾಮಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಜೇಶ್ ಡಿವೈಎಸ್ಪಿ ಚೆಲುವರಾಜ್. ತಾಲೂಕು ದಂಡಾಧಿಕಾರಿಗಳಾದ ಆದರ್ಶ ಸಿಡಿಪಿಓ ಕೃಷ್ಣಮೂರ್ತಿ. ಗ್ರಾಪಂ ಅಧ್ಯಕ್ಷ ಚಿಕ್ಕ ಬೋರಮ್ಮ ಗ್ರಾಮ ಪಂಚಾಯಿತಿಯ ಸದಸ್ಯರುಗಳು ಪದ್ಮನಾಭ ಅನೇಕ ಗಣ್ಯರು ಉಪಸಿತರಿದ್ದರು

Printed, Published and Owned by K.DEEPAK. Printed at THEJASVI OFFSET PRINTER, NO. 726 SHANKARA NAGAR, CHANDAGALU LAYOUT, MANDYA, KARNATAKA-571401
Published At Address: SHARADA, No. 2979/2, D23/2, 3rd floor, 6th Main, V V Mohalla, Mysore-570002. Editor: K.DEEPAK